ವಿಜಯಪುರ | ಸಂಪುಟ 04 | ಸಂಚಿಕೆ 073 | ಪುಟ 04 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ


ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com RNI NO: KARKAN/2023/86203 ಬುಧವಾರ, ಮೇ, 06, 2026

"ಪಶ್ಚಿಮ ಬಂಗಾಳದಲ್ಲಿ ಟಿಎಂಸಿ ಧೂಳೀಪಟವಾದಂತೆ ರಾಜ್ಯದಲ್ಲೂ ಕಾಂಗ್ರೆಸ್ ಮುಂದಿನ ಚುನಾವಣೆಯಲ್ಲಿ ನೆಲಕಚ್ಚಲಿದೆ. ಕಾಂಗ್ರೆಸ್‌ಗೆ ಯಾವುದೇ ಭವಿಷ್ಯ ಇಲ್ಲ. ಒಂದೆರಡು ಸ್ಥಾನಗಳನ್ನೂ ಗೆಲ್ಲಲೂ ಆಗದ ಕಾಂಗ್ರೆಸ್‌ಗೆ ಬಿಜೆಪಿ ಬಗ್ಗೆ ಮಾತನಾಡುವ ನೈತಿಕ ಹಕ್ಕಿಲ್ಲ."



■ ಬಿ.ಎಸ್.ಯಡಿಯೂರಪ್ಪ
ಮಾಜಿ ಮುಖ್ಯಮಂತ್ರಿ

## ಗರ್ಭಿಣಿಯರ ಆರೈಕೆ, ಸುರಕ್ಷತೆಗೆ ಹೆಚ್ಚಿನ ಆದ್ಯತೆ ನೀಡಿ

■ ಉದಯರಶ್ಮಿ ದಿನಪತ್ರಿಕೆ



**ವಿಜಯಪುರ ಜಿಲ್ಲಾ ಮಟ್ಟದ ಆರೋಗ್ಯ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ಜಿಲ್ಲಾಧಿಕಾರಿ ಡಾ.ಆನಂದ ಕೆ. ಅಧಿಕಾರಿಗಳಿಗೆ ಸೂಚನೆ**

ವಿಜಯಪುರ: ರಾಷ್ಟ್ರೀಯ ಆರೋಗ್ಯ ಅಭಿಯಾನ ಮತ್ತು ಪ್ರಧಾನಮಂತ್ರಿ ಸುರಕ್ಷಿತ ಮಾತೃತ್ವ ಅಭಿಯಾನ ಯೋಜನೆಯನ್ನು ಜಿಲ್ಲೆಯಲ್ಲಿ ಸಮರ್ಪಕವಾಗಿ ಅನುಷ್ಠಾನಗೊಳಿಸಬೇಕು. ಗರ್ಭಿಣಿಯರ ಆರೈಕೆ ಮತ್ತು ಸುರಕ್ಷತೆಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಜಿಲ್ಲಾಧಿಕಾರಿಗಳಾದ ಡಾ. ಆನಂದ ಕೆ. ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ನಡೆದ ಜಿಲ್ಲಾ ಮಟ್ಟದ ಆರೋಗ್ಯ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಗರ್ಭಿಣಿಯರ ಆರೋಗ್ಯ ತಪಾಸಣೆಯನ್ನು 12 ರಿಂದ 14 ಬಾರಿ ನಿಯಮಿತವಾಗಿ ಕೈಗೊಳ್ಳಬೇಕು. ಅನಿಮಿಯಾ, ಅಧಿಕ ರಕ್ತದೊತ್ತಡ, ಮಾನಸಿಕ ಆರೋಗ್ಯ ಮತ್ತು ವಿವಿಧ ಆರೋಗ್ಯ ಸಮಸ್ಯೆಗಳನ್ನು ಆರಂಭಿಕ ಹಂತದಲ್ಲಿ ಗುರುತಿಸಿ ಉಚಿತ ಆರೋಗ್ಯ ಚಿಕಿತ್ಸೆಯನ್ನು ಒದಗಿಸಬೇಕು ಎಂದರು.

ಜಿಲ್ಲೆಯಲ್ಲಿ ತಾಯಿ-ಮಕ್ಕಳ ಆರೋಗ್ಯ ರಕ್ಷಣೆಯಲ್ಲಿ ಆರ್.ಸಿ.ಹೆಚ್ ತಂತ್ರಾಂಶದಲ್ಲಿ ಗರ್ಭಿಣಿಯರಿಗೆ ಕಾಲ-ಕಾಲಕ್ಕೆ ಆರೋಗ್ಯದ ಕುರಿತು ತಿಳಿವಳಿಕೆ ನೀಡುವಂತೆ ಸೂಚನೆ ನೀಡಿದರು.

ಹೆರಿಗೆಯ ನಂತರ ಮಗುವಿಗೆ ಒಂದು ವರ್ಷ ತುಂಬುವವರೆಗೆ ಪಡೆದುಕೊಳ್ಳಬೇಕಾದ ಚಿಕಿತ್ಸೆ, ಔಷಧೋಪಚಾರ, ಲಸಿಕೆ ಸೌಲಭ್ಯಗಳ ಮಾಹಿತಿಯನ್ನು ಒದಗಿಸಬೇಕು. ಜೊತೆಗೆ ಆರೋಗ್ಯ ಸೇವಾ ಸೌಲಭ್ಯಗಳ ಮಾಹಿತಿ ನೀಡಬೇಕೆಂದು ಸೂಚಿಸಿದರು.

ಜಿಲ್ಲೆಯಲ್ಲಿ ಬಿಸಿಲಿನ ತಾಪ ದಿನದಿಂದ ದಿನಕ್ಕೆ ಹೆಚ್ಚುತ್ತಿದ್ದು ಗರ್ಭಿಣಿಯರು, ಅನಾರೋಗ್ಯ ಪೀಡಿತರು ಮತ್ತು ಬಹಳ ಸಮಯದಿಂದ ಔಷಧಿ ಸೇವಿಸುತ್ತಿರುವವರು ಬಿಸಿಲಿನಲ್ಲಿ ಹೆಚ್ಚು ಪರಿಶ್ರಮ ಮಾಡುವುದನ್ನು ತಪ್ಪಿಸಬೇಕು. ಜಿಲ್ಲೆಯಲ್ಲಿ ಶಿಶು ಮರಣ ಪ್ರಮಾಣ ಕಡಿಮೆ ಮಾಡುವದಕ್ಕೆ ಗುಣಾತ್ಮಕ ಆರೋಗ್ಯ ಸೇವೆ, ಪ್ರಸವ ಪೂರ್ವ ಆರೈಕೆ, ಗಂಡಾಂತರ ಗರ್ಭಿಣಿ ಹೆರಿಗೆಗಳನ್ನು ಗುರುತಿಸಿ ಅವರಿಗೆ ಪ್ರಸೂತಿ ತಜ್ಞ ವೈದ್ಯರಿಂದ ಆರೈಕೆ ಹಾಗೂ ಆಪ್ತ ಸಮಾಲೋಚನೆ ಮೂಲಕ ಶೇ.100ರಷ್ಟು ಹೆರಿಗೆಗಳನ್ನು ಆರೋಗ್ಯ ಸಂಸ್ಥೆಗಳಲ್ಲಿ ಮಾಡಲಾಗುತ್ತಿದೆ ಎಂದರು.

ಪ್ರತಿ ವರ್ಷ ಸಾವಿರಾರು ಜನರು ವಿಶೇಷವಾಗಿ ಮಕ್ಕಳು ನಾಯಿ ಕಡಿತಕ್ಕೆ ಒಳಗಾಗುತ್ತಾರೆ. ಸರಿಯಾದ ಅರಿವು ಮತ್ತು ಮುನ್ನಚ್ಚರಿಕೆಗಳೊಂದಿಗೆ ನಾಯಿ ಕಡಿತವನ್ನು ತಡೆಗಟ್ಟಬಹುದು. ಆದ್ದರಿಂದ ಎಲ್ಲ ಸಾರ್ವಜನಿಕ ಆಸ್ಪತ್ರೆಗಳಲ್ಲಿ ರ್‍ಯಾಬೀಸ್ ವ್ಯಾಕ್ಸಿನೇಷನ್ (ಲಸಿಕೆ) ದಾಸ್ತಾನು ಇರುವಂತೆ ನೋಡಿಕೊಳ್ಳಬೇಕು ಮತ್ತು ಜಾಗೃತಿ ಮೂಡಿಸಬೇಕು ಎಂದು ಜಿಲ್ಲಾಧಿಕಾರಿಗಳು ಸೂಚಿಸಿದರು.

ಸಭೆಯಲ್ಲಿ ಜಿಲ್ಲಾ ಶಸ್ತ್ರಚಿಕಿತ್ಸಕರಾದ ಡಾ.ಶಿವಾನಂದ ಮಾಸ್ತಿಹೊಳಿ, ಡಿಎಚ್‌ಇ, ಡಬ್ಲ್ಯೂಎಚ್.ಓ ಅಧಿಕಾರಿಗಳಾದ ಡಾ. ಮುಕುಂದ ಗಲಗಲಿ, ಆರ್.ಸಿಎಚ್‌ಓ ಬಿ.ಎಲ್.ಡಿ.ಈ ಸಂಸ್ಥೆಯ ಪ್ರಸೂತಿ ತಜ್ಞರು, ಸಾರ್ವಜನಿಕ ಶಿಕ್ಷಣ ಇಲಾಖೆ ಉಪ ನಿರ್ದೇಶಕರು, ಎಲ್ಲ ಕಾರ್ಯಕ್ರಮ ಅನುಷ್ಠಾನ ಅಧಿಕಾರಿಗಳು, ಎಲ್ಲ ತಾಲೂಕಾ ಆರೋಗ್ಯಾಧಿಕಾರಿಗಳು, ಮುಖ್ಯ ಆಡಳಿತ ವೈದ್ಯಾಧಿಕಾರಿಗಳು ಹಾಗೂ ಆರೋಗ್ಯ ಇಲಾಖೆಯ ಸಿಬ್ಬಂದಿ ಭಾಗವಹಿಸಿದ್ದರು.

## ಬಿಜೆಪಿಯಿಂದ ಕ್ರಿಮಿನಲ್ ಪಿತೂರಿ, ವೋಟ್ ಚೋರಿ

### ಶೃಂಗೇರಿ ಕ್ಷೇತ್ರದ ಮರು ಎಣಿಕೆ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ವ್ಯಂಗ್ಯ । ತನಿಖೆಯಿಂದ ಸತ್ಯ ಹೊರಬರಬೇಕೆಂದು ಆಗ್ರಹ



ಬೆಂಗಳೂರು: ಶೃಂಗೇರಿಯಲ್ಲಿ ನಡೆದ ಅಂಚೆ ಮತಗಳ ಮರು ಎಣಿಕೆಯಲ್ಲಿ ಬಿಜೆಪಿಯವರು ಕ್ರಿಮಿನಲ್ ಪಿತೂರಿ ಮಾಡಿ ವೋಟ್ ಚೋರಿ ಮಾಡಿದ್ದಾರೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಗಂಭೀರ ಆರೋಪ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 'ಇದು ಓಟ್ ಚೋರಿ ಅಲ್ಲ. ಓಟ್ ಡಕಾಯಿತಿ' ಎಂದು ಆರೋಪಿಸಿದರು. ಶೃಂಗೇರಿ ಕ್ಷೇತ್ರದ ಅಂಚೆ ಮತಗಳ ಮರು ಎಣಿಕೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಟಿ.ಡಿ. ರಾಜೇಗೌಡ ಅವರಿಗೆ ಬಂದಿದ್ದ ಮತಗಳು ಅಮಾನ್ಯ ಆಗಿವೆ. ಇಡೀ ದೇಶದಲ್ಲೇ ಇಂತಹ ಕ್ರಿಮಿನಲ್ ಚಟುವಟಿಕೆ ಎಲ್ಲೂ ನಡೆದಿಲ್ಲ. ಈ ಬಗ್ಗೆ ತನಿಖೆ ನಡೆದು ಸತ್ಯ ಹೊರಬರಬೇಕು' ಎಂದು ಅವರು ಆಗ್ರಹಿಸಿದರು.

ಅಂಚೆ ಮತಗಳನ್ನು ಅಮಾನ್ಯ ಮಾಡುವಂತೆ ಜಿಲ್ಲಾಧಿಕಾರಿ, ಚುನಾವಣಾಧಿಕಾರಿಯ ಮೇಲೆ ಕೇಂದ್ರದಿಂದ ಒತ್ತಡ ಇರಬಹುದು. ಯಾರೇ ಅಧಿಕಾರಿಗಳು ಇರಲಿ, ತಪ್ಪು ಮಾಡಿದ್ದರೆ ಶಿಕ್ಷೆ ಆಗಬೇಕು ಎಂದರು.

ಶೃಂಗೇರಿ ಕ್ಷೇತ್ರದ ಅಂಚೆ ಮತಗಳ ಮರುಎಣಿಕೆ ನ್ಯಾಯಾಲಯದ ಆದೇಶದಂತೆ ನಡೆದಿದೆ. ಕಳೆದ ವಿಧಾನಸಭಾ ಚುನಾವಣೆಯಲ್ಲಿ ರಾಜೇಗೌಡ 201 ಮತಗಳ ಅಂತರದಿಂದ ಗೆದ್ದಿದ್ದರು. ರಾಜೇಗೌಡಗೆ 59.170 ಮತಗಳು ಬಂದಿದ್ದವು, ಎದುರಾಳಿ ಜೀವರಾಜ್ ಗೆ 58,970 ಮತಗಳು ಬಂದಿತ್ತು.

ಚುನಾವಣಾ ಏಜೆಂಟರು, ರಿಟರ್ನಿಂಗ್ ಆಫೀಸರ್ ಗಳು ಸಹಿ ಮಾಡಿ ಫಲಿತಾಂಶ ಘೋಷಣೆ ಮಾಡಿದ್ದರು. ನಂತರ ಬಿಜೆಪಿ ಅಭ್ಯರ್ಥಿ ಜೀವರಾಜ್ ಅವರು ಮರು ಎಣಿಕೆ ಮಾಡಬೇಕೆಂದು ಹೈಕೋರ್ಟ್ ಗೆ ಹೋಗಿದ್ದರು. ಅಂಚೆ ಮತಗಳ ಮರುಎಣಿಕೆ ಮಾಡಿ ಲೋಪ ಆಗಿದ್ದರೆ ಪತ್ತೆ ಹಚ್ಚುವಂತೆ ಕೋರ್ಟ್ ಸೂಚಿಸಿತ್ತು.

ಕೋರ್ಟ್ ಆದೇಶದಂತೆ ಮರು ಎಣಿಕೆ ನಡೆಯಿತು. ಅಂಚೆ ಮತಗಳ ಮರು-ಎಣಿಕೆಯಲ್ಲಿ ರಾಜೇಗೌಡಗೆ ಲಭಿಸಿದ್ದ 250 ಮತಗಳು ಅಮಾನ್ಯವಾಗಿವೆ. ಇದು ಹೇಗೆ ಅಮಾನ್ಯ ಆಗುತ್ತದೆ? ಇದನ್ನು ನೋಡಿದಾಗ ಬಿಜೆಪಿಯವರು ಓಟ್ ಚೋರಿ ಮಾಡಿರುವುದು ಸ್ಪಷ್ಟವಾಗಿ ಗೊತ್ತಾಗುತ್ತೆ' ಎಂದರು.

ರಾಜೇಗೌಡ ದೂರು ಕೊಟ್ಟಿದ್ದಾರೆ, ಎಫ‌ಐಆರ್ ಆಗಿದೆ. ನ್ಯಾಯಾಲಯಕ್ಕೂ ಹೋಗಿದ್ದಾರೆ. ಚುನಾವಣಾ ಅಬ್ಸರ್ವರ್ ಕ್ಲಿಯರೆನ್ಸ್ ಕೊಟ್ಟ ಮೇಲೆಯೇ ಘೋಷಣೆ ಮಾಡಬೇಕು. ಇವರು ಕೇಳದೆಯೇ ಫಲಿತಾಂಶ ಘೋಷಿಸಿದ್ದಾರೆ. ಇದನ್ನು ಆತುರಾತುರವಾಗಿ ಘೋಷಣೆ ಮಾಡಿರೋದು ಸರಿಯಲ್ಲ. ಇದನ್ನು ಕೋರ್ಟ್ ನಲ್ಲಿ ಪ್ರಶ್ನಿಸುತ್ತೇವೆ. ನಾವು ಕ್ರಿಮಿನಲ್ ಕೇಸ್ ಹಾಕಿದ್ದೇವೆ, ನಿಷ್ಪಕ್ಷಪಾತವಾಗಿ ತನಿಖೆ ನಡೆಯಬೇಕು ಎಂದರು.

"ಸಂವಿಧಾನದ ಮೇಲೆ ನಂಬಿಕೆ ಇಲ್ಲದವರು ಬಿಜೆಪಿಯವರು. ಹೀಗಾಗಿ ಅಪರಾಧಗಳನ್ನು ಮಾಡಲು ಹಿಂದೆ ಮುಂದೆ ನೋಡೋದಿಲ್ಲ. ಕೇಂದ್ರದ ಮಂತ್ರಿಗಳು, ವಿರೋಧ ಪಕ್ಷಗಳ ನಾಯಕರು ಸಮರ್ಥನೆ ಮಾಡಿಕೊಳ್ಳೋದ್ರಲ್ಲಿ ಅರ್ಥ ಇಲ್ಲ. ಮುಂದೆ ಜನರೇ ಇವರಿಗೆ ಪಾಠ ಕಲಿಸುತ್ತಾರೆ. ಇದನ್ನ ಫಾರೆನ್ಸಿಕ್ ಗೆ ಕಳುಹಿಸಬೇಕಿದೆ, ಇದು ಗೊತ್ತಿದ್ದು ಘೋಷಣೆ ಮಾಡಿದ್ದಾರೆ."



■ ಸಿದ್ದರಾಮಯ್ಯ
ಮುಖ್ಯಮಂತ್ರಿ ಗಳು

## ಜಾಗೃತಿ ಸಮಿತಿ ಸದಸ್ಯತ್ವಕ್ಕೆ ಅರ್ಹರಿಂದ ಅರ್ಜಿ ಆಹ್ವಾನ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: 2025-26 ನೇ ಸಾಲಿನಲ್ಲಿ ಹೊಸದಾಗಿ ಸಫಾಯಿ ಕರ್ಮಚಾರಿಗಳ ನಿಯೋಜನೆ ನಿಷೇಧ ಹಾಗೂ ಪುನರ್ವಸತಿ ಕಾಯ್ದೆ 2013 ಜಿಲ್ಲಾ ಮಟ್ಟದ ಜಾಗೃತಿ ಸಮಿತಿ ರಚಿಸಲು, ಪರಿಶಿಷ್ಟ ಜಾತಿ ಮತ್ತು ಪಂಗಡದ ಅಭ್ಯರ್ಥಿಗಳಿಂದ ಜಿಲ್ಲಾ ಸಮಾಜ ಕಲ್ಯಾಣ ಇಲಾಖೆ ಅರ್ಜಿ ಆಹ್ವಾನಿಸಿದೆ. ಜಿಲ್ಲಾ ಮಟ್ಟದ ಸಫಾಯಿ ಕರ್ಮ ಚಾರಿಗಳಜಿಲ್ಲಾಜಾಗೃತಿಸಮಿತಿಸದಸ್ಯರಾಗಲುಬಯಸುವವರುಸಫಾಯಿಕರ್ಮ ಚಾರಿಗಳ ಪುನರ್ವಸತಿಗಾಗಿ ಕೆಲಸ ಮಾಡುತ್ತಿರುವ ಸಂಘಟನೆಗಳಿಗೆ ಸೇರಿದ ಅಥವಾ ಜಿಲ್ಲಾ ಮಟ್ಟದಲ್ಲಿ ವಾಸಿಸುವ ಸಮುದಾಯವನ್ನು ಪ್ರತಿನಿಧಿಸುತ್ತಿರುವ 04 ಜನ ಮೀರದಂತೆ ಸಾಮಾಜಿಕ ಕಾರ್ಯಕರ್ತರು, ಅವರಲ್ಲಿ ಇಬ್ಬರು ಮಹಿಳೆಯರು ಇರತಕ್ಕದ್ದು.

ಒಟ್ಟು 04 ಜನ ಅಧಿಕಾರೇತರ ಸದಸ್ಯರನ್ನು ನಾಮನಿರ್ದೇಶನ ಮಾಡಲಾಗುವುದು ಎಂದು ಜಿಲ್ಲಾ ಸಮಾಜ ಕಲ್ಯಾಣ ಅಧಿಕಾರಿ ತಿಳಿಸಿದ್ದಾರೆ. ಈ ಸಮಿತಿಗೆ ಸದಸ್ಯರಾಗ ಬಯಸುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ಮೇ 10ರ ಮಧ್ಯಾಹ್ನ 1:30 ಗಂಟೆಯ ಒಳಗಾಗಿ ಅಗತ್ಯ ದಾಖಲಾತಿಗಳೊಂದಿಗೆ ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿಗಳನ್ನು ಉಪನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ವಿಜಯಪುರ ಅವರ ಕಚೇರಿಯಿಂದ ಮೇ 5ರೊಳಗಾಗಿ ಪಡೆದುಕೊಳ್ಳಬಹುದಾಗಿದೆ ಎಂದವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಆಲಮಟ್ಟಿ: ಸಂಕನಾಳ ರೈತರಿಂದ ಎಸ್‌ಎಲ್‌ಓ ಕಚೇರಿಗೆ ಮುತ್ತಿಗೆ

■ ಉದಯರಶ್ಮಿ ದಿನಪತ್ರಿಕೆ



**ನೋಟಿಸ್ ನೀಡದೆ ಕಾಲುವೆ ಕಾಮಗಾರಿ । ರೈತ ಸಂಘದ ನೇತೃತ್ವದಲ್ಲಿ ಸಂಕನಾಳ ಭಾಗದ ರೈತರಿಂದ ಪ್ರತಿಭಟನೆ**

ಆಲಮಟ್ಟಿ: ಸಂಕನಾಳ ಶಾಖಾ ಕಾಲುವೆ ನಿರ್ಮಾಣಕ್ಕೆ ಸ್ವಾಧೀನಪಡಿಸಿಕೊಂಡ ಜಮೀನಿನ ರೈತರಿಗೆ 11(1) ನೋಟಿಸ್ ನೀಡಿ ಕಾಮಗಾರಿ ಆರಂಭಿಸಬೇಕು ಎಂದು ಆಗ್ರಹಿಸಿ ಅಖಂಡ ಕರ್ನಾಟಕ ರೈತ ಸಂಘದ ನೇತೃತ್ವದಲ್ಲಿ ಸಂಕನಾಳ ಭಾಗದ ರೈತರು ಸೋಮವಾರ ಆಲಮಟ್ಟಿಯಲ್ಲಿ ಪ್ರತಿಭಟನೆ ನಡೆಸಿದರು.

ರಾಮಲಿಂಗೇಶ್ವರ ದೇವಸ್ಥಾನದಿಂದ ಪ್ರತಿಭಟನಾ ಮೆರವಣಿಗೆ ಹೊರಟ ರೈತರು ವಿಶೇಷ ಭೂಸ್ವಾಧೀನಾಧಿಕಾರಿ ಕಚೇರಿಗೆ ತೆರಳಿ ಎಸ್‌ಎಲ್‌ಓ ಎಂ.ಬಿ. ನಾಗತಾಣ ಅವರಿಗೆ ಮನವಿ ಸಲ್ಲಿಸಿದರು.

ಈ ವೇಳೆ ಮಾತನಾಡಿದ ಜಿಲ್ಲಾಧ್ಯಕ್ಷ ಉಮೇಶ ವಾಲೀಕಾರ, "ಮುಳವಾಡ ಏತ ನೀರಾವರಿ ಯೋಜನೆಗೆ ಸಂಬಂಧಿಸಿದ ಸಂಕನಾಳ ಶಾಖಾ ಕಾಲುವೆ ನರಸಲಗಿ, ಅಗಸಬಾಳ, ಸಂಕನಾಳ, ಕಣಕಾಲ, ಸೋಲವಾಡಗಿ, ಕನ್ನಾಳ, ವಡವಡ, ಗಿಜಾಯವಾಡಗಿ ಗ್ರಾಮಗಳ ವ್ಯಾಪ್ತಿಯಲ್ಲಿ ಹಾದು ಹೋಗಿದೆ. ಈ ಮೊದಲು ಸಂಕನಾಳದವರೆಗೆ ಕಾಲುವೆ ಕಾಮಗಾರಿ ಮುಗಿದಿದೆ. ಆದರೆ ಕನ್ನಾಳ ಗ್ರಾಮದವರೆಗೆ ಇನ್ನೂ ವಿತರಣಾ ಕಾಲುವೆ ಕಾಮಗಾರಿ ಬಾಕಿ ಉಳಿದಿದೆ" ಎಂದರು.

"ಈ ಹಿಂದೆ ಬಾಕಿ ಉಳಿದ ಕಾಮಗಾರಿ ಪೂರ್ಣಗೊಳಿಸಲು ಹೋರಾಟ ನಡೆಸಿದ್ದೆವು. ಹೋರಾಟದ ಫಲವಾಗಿ ಇಲಾಖೆ ಎಚ್ಚೆತ್ತುಕೊಂಡು ಉಳಿದ ಕಾಮಗಾರಿಗೆ ಚಾಲನೆ ನೀಡಿತ್ತು. ಆದರೆ ಭೂಮಿ ಕಳೆದುಕೊಳ್ಳುವ ರೈತರಿಗೆ ನೋಟಿಸ್ ನೀಡದೆ ಕಾಮಗಾರಿ ಆರಂಭಿಸಿದ್ದರಿಂದ ರೈತರು ತಡೆ ಒಡ್ಡಿದ್ದಾರೆ. ಇದರಿಂದ ಕಾಮಗಾರಿ ಸ್ಥಗಿತಗೊಂಡಿದೆ" ಎಂದು ತಿಳಿಸಿದರು.

"ಬೇಸಿಗೆಯ ತಾಪ ಹೆಚ್ಚಿರುವುದರಿಂದ ಸುತ್ತಮುತ್ತಲಿನ ಹಳ್ಳಿಗಳಲ್ಲಿ ಜನ ಹಾಗೂ ಜಾನುವಾರುಗಳಿಗೆ ಕುಡಿಯುವ ನೀರಿನ ಸಮಸ್ಯೆ ಗಂಭೀರವಾಗಿದೆ. 4-5 ಕಿ.ಮೀ ದೂರ ಹೋಗಿ ನೀರು ತರುವ ಪರಿಸ್ಥಿತಿ ನಿರ್ಮಾಣವಾಗಿದೆ. ಆದ್ದರಿಂದ ರೈತರಿಗೆ ಕೂಡಲೇ ನೋಟಿಸ್ ನೀಡಿ ಬಾಕಿ ಉಳಿದ ಕಾಮಗಾರಿಯನ್ನು ಪ್ರಾರಂಭಿಸಬೇಕು" ಎಂದು ಆಗ್ರಹಿಸಿದರು.

"ಶೀಘ್ರದಲ್ಲಿ ನೋಟಿಸ್ ನೀಡಿ ಕಾಮಗಾರಿಗೆ ಚಾಲನೆ ನೀಡದಿದ್ದರೆ ಕಚೇರಿ ಮುಂದೆ ಧರಣಿ ಸತ್ಯಾಗ್ರಹ ಪ್ರಾರಂಭಿಸಲಾಗುವುದು" ಎಂದು ಉಮೇಶ ವಾಲೀಕಾರ ಎಚ್ಚರಿಕೆ ನೀಡಿದರು.


ಈ ಸಂದರ್ಭದಲ್ಲಿ ರಾಜ್ಯ ಪ್ರಧಾನ ಕಾರ್ಯದರ್ಶಿ ಅರವಿಂದ ಕುಲಕರ್ಣಿ, ಪ್ರಲ್ಹಾದ ನಾಗರಾಳ, ಸಾಯಬಣ್ಣ ಅಂಗಡಿ, ಇಬ್ರಾಹಿಂ ವಾಲೀಕಾರ, ಮಲ್ಲಪ್ಪ ಹಳೆನಿಡಗುಂದಿ, ಬಸಪ್ಪ ತೋಳಮಟ್ಟಿ, ಶ್ರೀಶೈಲ ಕಲಾದಗಿ, ಗುರಪ್ಪ ಪೂಜಾರಿ, ಸಂದೀಪ ನಾಗರಡ್ಡಿ, ಸೋಮೇಶ ನಾಗರಡ್ಡಿ, ಮುದಕಪ್ಪ ಮೇಟಿ, ಮಂಜು ಬಿರಾದಾರ, ಅಶೋಕ ಹಡಪದ, ಎಮನೂರಪ್ಪ ಸರೂರ, ಸಂಗು ಮೇಟಿ, ಹಣಮಂತ ವಾಲೀಕಾರ, ಪರಶೂರಾಮ ಮುತ್ತಗಿ, ಪ್ರಕಾಶ ವಾಲೀಕಾರ, ಶಿವಪ್ಪ ಚಲುವಾದಿ, ಸಂಗಪ್ಪ ಹುನಗುಂದ ಸೇರಿದಂತೆ ನೂರಾರು ರೈತರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

## ಮುಂಬಯಿ ರೈಲ್ವೆಯನ್ನು ಇಂಡಿ ನಿಲ್ದಾಣದಲ್ಲಿ ನಿಲ್ಲಿಸಲು ಒತ್ತಾಯ

**ಸಂಸದ ರಮೇಶ ಜಿಗಜಿಣಗಿ ಅವರಿಂದ ನೈಋತ್ಯ ರೈಲ್ವೆಯ ಪ್ರಧಾನ ವ್ಯವಸ್ಥಾಪಕರಿಗೆ ಪತ್ರ**

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಗದಗದಿಂದ ಮುಂಬಯಿಗೆ ಸಂಚರಿಸುವ ರೈಲ್ವೆಗೆ ಇಂಡಿ ರೈಲ್ವೆ ನಿಲ್ದಾಣದಲ್ಲಿ ನಿಲುಗಡೆ ಸೌಲಭ್ಯ ಕಲ್ಪಿಸಬೇಕು ಎಂದು ಸಂಸದರಾದ ರಮೇಶ ಜಿಗಜಿಣಗಿ ಒತ್ತಾಯಿಸಿದ್ದಾರೆ.



ನಿಂಬೆ ಬೆಳೆಯ ಜಾಗತಿಕ ಟ್ಯಾಗ್ ಪಡೆದಿರುವ ದೇಶದ ಎಲ್ಲ ಕಡೆ ನಿಂಬೆ ಹಣ್ಣು ಸರಬರಾಜು ಮಾಡುವ ಕರ್ನಾಟಕ ಮಹಾರಾಷ್ಟ್ರದ ಗಡಿ ಭಾಗವಾಗಿರುವ ಇಂಡಿ ಸಾಕಷ್ಟು ವ್ಯಾಪಾರ ವಹಿವಾಟಿನಲ್ಲಿ ಮುಂಚೂಣಿಯಲ್ಲಿದೆ. ಜೊತೆಗೆ ಅತ್ಯುತ್ತಮ ಗುಣಮಟ್ಟದ ದ್ರಾಕ್ಷಿ, ದಾಳಿಂಬೆ ಹಾಗೂ ಇತರೆ ವಾಣಿಜ್ಯ ಬೆಳೆಗಳನ್ನು ಹೆಚ್ಚಿನ ಪ್ರಮಾಣದಲ್ಲಿ ರಫ್ತು ಮಾಡುತ್ತಿದ್ದು, ಜವಳಿ ವ್ಯಾಪಾರದ ಕೇಂದ್ರವಾಗಿರುವ ಇಂಡಿ ತಾಲೂಕು, ಪ್ರಸ್ತುತ ಪುರಸಭೆಯಿಂದ ನಗರಸಭೆ ಉನ್ನತೀಕರಣಗೊಂಡಿದೆ. ಇದರಿಂದಾಗಿ ಹೆಚ್ಚಿನ ಪ್ರಮಾಣದಲ್ಲಿ ರೆವೆನ್ಯೂ ಸಂಗ್ರಹಿಸುತ್ತಿರುವ ತಾಲೂಕಾಗಿದೆ ಎಂದವರು ನೈಋತ್ಯ ರೈಲ್ವೆ ವಲಯದ ಪ್ರಧಾನ ವ್ಯವಸ್ಥಾಪಕರಿಗೆ ಪತ್ರ ಬರೆದಿದ್ದಾರೆ.

ವಿಜಯಪುರ ಜಿಲ್ಲೆಯಲ್ಲಿಯೇ ಅತೀ ಹೆಚ್ಚಿನ ಜನಸಂಖ್ಯೆ ಹೊಂದಿರುವ ತಾಲೂಕಾಗಿರುವ ಇಂಡಿ ನಗರದಿಂದ ಕಡಿಮೆ ದೂರದಲ್ಲಿ ಭೀಮಾನದಿಯಿದೆ. ಹೆಚ್ಚಿನ ರೈತರು ಕಬ್ಬು ಬೆಳೆಯುತ್ತಿದ್ದಾರೆ. ಈ ಎಲ್ಲ ವಾಣಿಜ್ಯ ಬೆಳೆ ಬೆಳೆಯುವ ರೈತರಿಗೆ ಹಾಗೂ ವ್ಯಾಪಾರಸ್ಥರಿಗೆ ಗದಗದಿಂದ ಮುಂಬಯಿಗೆ ಸಂಚರಿಸುವ ಮಧ್ಯ ಮಾರ್ಗದಲ್ಲಿ ಇಂಡಿ ರೈಲ್ವೆ ನಿಲ್ದಾಣದಲ್ಲಿ ನಿಲುಗಡೆ ವ್ಯವಸ್ಥೆಯಾದರೆ ಮುಂಬಯಿಗೆ ಹೋಗಿ ಬರುವ ವ್ಯಾಪಾರ ವಹಿವಾಟಿಗೆ ಹೆಚ್ಚಿನ ಪುಷ್ಟಿ ನೀಡಿದಂತಾಗುವುದೆಂದು ಇಂಡಿ ತಾಲೂಕಿನ ಜನತೆ ಕೋರಿಕೆಯಾಗಿದೆ.

ಹಾಗಾಗಿ ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿ, ಗದಗದಿಂದ ಮುಂಬಯಿಗೆ ಹೋಗುವ ರೈಲ್ವೆಯನ್ನು ಇಂಡಿ ರೈಲ್ವ ನಿಲ್ದಾಣದಲ್ಲಿ ಕ್ಷಣಕಾಲ ನಿಲುಗಡೆ ಮಾಡಬೇಕು. ಇದರಿಂದ ವ್ಯಾಪಾರ ವಹಿವಾಟಿಗೆ ತುಂಬಾ ಅನುಕೂಲವಾಗುವುದೆಂದು ಸಂಸದ ರಮೇಶ ಜಿಗಜಿಣಗಿ ಪತ್ರದಲ್ಲಿ ತಿಳಿಸಿದ್ದಾರೆ.

## ಅಧಿಕಾರಿಗಳಿಂದ ಸರಕಾರದ ಬೊಕ್ಕಸಕ್ಕೆ ಕೋಟ್ಯಂತರ ರೂ. ನಷ್ಟ

### ಇಂಡಿ ಉಪನೋಂದಣಾಧಿಕಾರಿಗಳ ಕಚೇರಿಯಲ್ಲಿ ಭ್ರಷ್ಟಾಚಾರ ತಾಂಡವದ ಆರೋಪ

■ ಉದಯರಶ್ಮಿ ದಿನಪತ್ರಿಕೆ

ಇಂಡಿ: ಉಪನೋಂದಣಾಧಿಕಾರಿಗಳ ಕಚೇರಿಯಲ್ಲಿ ಭ್ರಷ್ಟಾಚಾರ ಮಿತಿ ಮೀರಿದ್ದು ಸರಕಾರದ ಬೊಕ್ಕಸಕ್ಕೆ ಕೋಟ್ಯಂತರ ರೂಪಾಯಿ ಹಾನಿಯಾಗುತ್ತಿದ್ದರೂ ಸಂಬಂಧಿಸಿದ ಮೇಲಾಧಿಕಾರಿಗಳು ತಮಗೇನೂ ಗೊತ್ತಿಲ್ಲದಂತೆ ಕುಳಿದಿರುವುದು ದುರಾದೃಷ್ಟವೇ ಸರಿ.

ಏಜೆಂಟರ ಮುಖಾಂತರ ನೀರಾವರಿ ಜಮೀನಿಗೆ ಒಣ ಬೇಸಾಯದ ವ್ಯಾಲ್ಯೂವೇಶನ್ ಮಾಡಿಸಿ ಚಲನ್ ಕಟ್ಟಿದ್ದರಿಂದ ಸರಾಸರಿ 50 ಪ್ರತಿಶತದಷ್ಟು ಹಣ ಸರಕಾರದ ಖಜಾನೆಗೆ ಜಮಾ ಆಗದೆ ಏಜೆಂಟರು ಹಾಗೂ ಉಪನೋಂದಣಾಧಿಕಾರಿಗಳ ಪಾಲಾಗುತ್ತಿದೆ.


ಇದಕ್ಕೆ ಪುಷ್ಟಿ ಎಂಬಂತೆ ಇಂಡಿ ತಾಲೂಕಿನ ಸಾಲೋಟಗಿ ಗ್ರಾಮದ 354/8 ಸರ್ವೇ ನಂಬರಿನ 3.25 ಎಕರೆ ಜಮೀನಿನ ಪಹಣಿಯಲ್ಲಿ ಸ್ಪಷ್ಟವಾಗಿ ನೀರಾವರಿಯ ಮೂಲ ಬಾವಿ/ ಕೊಳವೆಭಾವಿ ಎಂದು ಉಲ್ಲೇಖಿಸಲಾಗಿದೆ ಆದರೂ ಆ ಖರೀದಿಗೆ ಒಣ ಬೇಸಾಯದ ವ್ಯಾಲ್ಯೂವೇಶನ್ ಮಾಡಿ ಕಡಿಮೆ ಚಲನ್ ತೆಗೆಸಲಾಗಿದೆ.


ಅದೇ ಗ್ರಾಮದ ಸರ್ವೇ 165*4 ಸರ್ವೇ ನಂಬರಿನ 3.00 ಎಕರೆ ಜಮೀನಿನ ಪಹಣಿಯಲ್ಲಿ ಕೊಳವೆ ಬಾವಿ ಎಂದು ನಮೂದಾಗಿದೆ. ಅದನ್ನೂ ಸಹ ಒಣ ನೀರಾವ ಚಲನ್ ತೆಗೆಸಿ ಖರೀದಿ ಮಾಡಿ ಕೊಡಲಾಗಿದೆ.

ಸರ್ವೇ ನಂಬರ್ 297/*/6ರ 5-00 ಎಕರೆ ಜಮೀನಿನ ಪಹಣಿಯಲ್ಲಿಯೂ ನೀರಾವರಿ ಮೂಲ ಬಾವಿ/ ಕೊಳವೆಬಾವಿ ಇದ್ದರೂ ಒಣ ಬೇಸಾಯದ ಚಲನ್ ತೆಗೆಸಲಾಗಿದೆ.

ಭೈರುಣಗಿ ಗ್ರಾಮದ ಸರ್ವೇ 34/*/6ರ 2:10 ಜಮೀನಿನ ಪಹಣಿಯಲ್ಲಿಯೂ ನೀರಾವರಿ ಇದ್ದರೂ ಒಣಬೇಸಾಯದ ವ್ಯಾಲ್ಯೂವೇಶನ್ ಮೇಲೆ ಖರೀದಿ ಮಾಡಲಾಗಿದೆ ಹೀಗೆ ಸಾಕಷ್ಟು ಇಂತಹ ಪ್ರಕರಣಗಳಿವೆ. ಕೂಡಲೆ ಸಂಬಂಧಿಸಿದ ಮೇಲಾಧಿಕಾರಿಗಳು ಈ ಕುರಿತು ಪರಿಶೀಲಿಸಿ ಉಪನೋಂದಣಾಧಿಕಾರಿ ಅಂಜಲಿ ಸಿ ಅವರ ಮೇಲೆ ಕ್ರಮ ಕೈಗೊಳ್ಳುವಂತೆ ಸಾರ್ವಜನಿಕರು ಒತ್ತಾಯಿಸಿದ್ದಾರೆ.

"ಪತ್ರಿಕೆಗಳಲ್ಲಿನ ವರದಿ ಆಧರಿಸಿ ಇಂಡಿ ಉಪನೋಂದಣಾಧಿಕಾರಿಗೆ ಮಾಹಿತಿ ಕೇಳಿ ನೋಟಿಸ್ ನೀಡಲಾಗಿದೆ. ಅವರಿಂದ ಉತ್ತರ ಪಡೆದ ನಂತರ ಮುಂದಿನ ಕ್ರಮ ಕೈಗೊಳ್ಳಲಾಗುವುದು."
■ ಡಾ.ಆನಂದ ಕೆ.
ಜಿಲ್ಲಾಧಿಕಾರಿಗಳು, ವಿಜಯಪುರ





"ಉಪನೋಂದಣಾಧಿಕಾರಿಗಳ ಕಾರ್ಯಾಲಯದಲ್ಲಿ ಏಜೆಂಟರ ಹಾವಳಿ ಹೆಚ್ಚಾಗಿದೆ. ಕಚೇರಿಯಲ್ಲಿ ಕಚೇರಿಗೆ ಸಂಬಂಧಿಸದ ಹಲವರು ಓಡಾಡಿಕೊಂಡು ಏಜೆಂಟ್‌ಗಿರಿ ಮಾಡುತ್ತಿದ್ದಾರೆ. ಸಬ್ ರಜಿಸ್ಟಾರ್ ಅವರೇ ಏಜೆಂಟರನ್ನು ಇಟ್ಟುಕೊಂಡು ಆನ್‌ಲೈನ್ ಅಪ್ಲಿಕೇಶನ್ ಹಾಕಿಸುವಾಗ ಪಹಣಿಯಲ್ಲಿನ ನೀರಾವರಿ ತೆಗೆಸಿ ಒಣ ಬೇಸಾಯದ ಜಮೀನಿನ ಚಲನ್ ತೆಗೆಸಿ ಹೆಚ್ಚುವರಿ ಹಣವನ್ನು ಏಜೆಂಟರು ಹಾಗೂ ಸಬ್ ರಜಿಸ್ಟಾರ್ ಪಡೆದುಕೊಳ್ಳುತ್ತಿದ್ದಾರೆ."
■ ಮಲ್ಲಿಕಾರ್ಜುನ ಹಾವಿನಾಳಮಠ
ಸಾಮಾಜಿಕ ಕಾರ್ಯಕರ್ತ, ಇಂಡಿ

"ಉಪನೋಂದಣಾಧಿಕಾರಿಗಳ ಕಚೇರಿಯಲ್ಲಿ ಸಂಬಂಧ ಇಲ್ಲದವರೂ ಕೆಲಸ ಮಾಡುತ್ತಾರೆ. ಏಜೆಂಟರ ಮುಖಾಂತರ ಹೋದರಷ್ಟೇ ಕೆಲಸವಾಗುತ್ತದೆ. ನೇರವಾಗಿ ಹೋದರೆ ಮಾಹಿತಿ ಸಿಗಲ್ಲ. ಈ ಅಧಿಕಾರಿಯನ್ನು ಕೂಡಲೆ ಅಮಾನತ್ತು ಮಾಡಬೇಕು."
■ ಎಸ್.ಬಿ. ಕೆಂಬೋಗಿ
ಜಿಲ್ಲಾ ಅಧ್ಯಕ್ಷ ಹಸಿರುಸೇನೆ ಹಾಗೂ ರೈತ ಸಂಘ.

## ಸಮಾಜದ ಮುಖಂಡರು ಒಟ್ಟಾಗಿ ಹೋರಾಡಲು ನಿರ್ಧಾರ । ಶಾಸಕ ಅನಿಲ್ ಚಿಕ್ಕಮಾದು ಹೇಳಿಕೆ

# ಎಸ್ಟಿ (ನಾಯಕ) ಜನಾಂಗಕ್ಕೆ ಮೀಸಲಾತಿಯಲ್ಲಿ ಅನ್ಯಾಯ

■ ಉದಯರಶ್ಮಿ ದಿನಪತ್ರಿಕೆ

ಹೆಚ್ ಡಿಕೋಟೆ: ಪರಿಶಿಷ್ಟ ಪಂಗಡ ಮೀಸಲಾತಿ ಶೇ.7ರಷ್ಟು ಇದ್ದಿದ್ದರೆ ಇವತ್ತು ಸರ್ಕಾರ ಭರ್ತಿ ಮಾಡಲು ಮುಂದಾಗಿರುವ 56,432 ಹುದ್ದೆಗಳ ನೇಮಕಾತಿಯಲ್ಲಿ ನಮ್ಮ ಸಮುದಾಯದ 15 ರಿಂದ 20 ಸಾವಿರ ಜನ–ರಿಗೆ ಉದ್ಯೋಗ ಸಿಗುತ್ತಿತ್ತು. ಆದರೆ ಈ ಅವಕಾಶ ಮತ್ತೆ ಸಿಗುತ್ತೋ ಇಲ್ಲವೋ ಗೊತ್ತಿಲ್ಲ. ಮಳೆಗಾಲ ಅಧಿವೇಶನದೊಳಗೆ ಸಮಾಜದ ಮುಖಂಡರು , ಸಂಸದರು ಒಟ್ಟಾಗಿ, ಕೇಂದ್ರ ಸರಕಾರದ ಮೇಲೆ ಒತ್ತಡ ಹೇರಿ, ಮೀಸಲಾತಿ ಪ್ರಮಾಣ ಶೇ. 3 ರಿಂದ ಶೇ. 7 ಕ್ಕೆ ಹೆಚ್ಚಳ ಮಾಡುವಂತೆ ಪ್ರಾಮಾಣಿಕ ಪ್ರಯತ್ನ ಮಾಡಬೇಕು ಎಂದು ಶಾಸಕ ಅನಿಲ್ ಚಿಕ್ಕಮಾದು ಹೇಳಿದರು.

ಪಟ್ಟಣದ ಖಾಸಗಿ ಫಂಕ್ಷನ್ ಹಾಲ್ ನಲ್ಲಿ ನಡೆದ ಹೆಚ್ ಡಿ ಕೋಟೆ ಮತ್ತು ತಾಲೂಕು ಎಸ್ಟಿ ಸಮುದಾಯದ ನಾಯಕರ ಸಭೆಯಲ್ಲಿ ಮಾತನಾಡಿದ ಶಾಸಕ ಅನಿಲ್ ಚಿಕ್ಕಮಾದು , ಸಮಾಜದ ಮುಖಂಡರು ಸಭೆ ಕರೆದಾಗ, ಪಕ್ಷಾತೀತವಾಗಿ ಎಲ್ಲರೂ ಭಾಗಿಯಾಗಬೇಕು. ಸಮಾಜ ಒಗ್ಗೂಡಿದಾಗ ಮಾತ್ರ ಶಕ್ತಿ ಬರುತ್ತದೆ. ಇದನ್ನು ಎಲ್ಲರೂ ಅರ್ಥಮಾಡಿಕೊಳ್ಳಬೇಕು. ಪರಿಶಿಷ್ಟ ಪಂಗಡ ಮೀಸಲಾತಿ ಶೇ. 3 ರಿಂದ ಶೇ. 7 ಕ್ಕೆ ಹೆಚ್ಚಳವಾದಾಗ ಸಿಹಿ ಹಂಚಿ ಸಂಭ್ರಮಪಟ್ಟಿವಿ. ಆದರೆ ವ್ಯಕ್ತಿಯೊಬ್ಬರು ಮೀಸಲಾತಿ ಪ್ರಶ್ನಿಸಿ ಕೋರ್ಟ್ ಮೊರೆ ಹೋಗಿ ತಡೆಯಾಜ್ಞೆ ತಂದಿರುವುದರಿಂದ ಮೀಸಲಾತಿಯಲ್ಲಿ ವಂಚಿತರಾಗಿದ್ದೇವೆ. ಜೂನ್– ಜುಲೈ ತಿಂಗಳಲ್ಲಿ ಮಳೆಗಾಲ ಅಧಿವೇಶನ ಆರಂಭವಾಗುತ್ತೆ. ಅಷ್ಟರೊಳಗೆ ಸಮಾಜದ ಮುಖಂಡರು, ಚುನಾಯಿತ ಪ್ರತಿನಿಧಿಗಳು ಒಟ್ಟಾಗಿ, ನಮ್ಮ ಸಮಾಜದ ಸಂಸದರ ಜೊತೆಗೂಡಿ, ಕೇಂದ್ರ



ಸರ್ಕಾರದ ಮೇಲೆ ಒತ್ತಡ ಹೇರಬೇಕು ಎಂದು ಶಾಸಕ ಅನಿಲ್ ಚಿಕ್ಕಮಾದು ಹೇಳಿದರು.

ಮಾಜಿ ಶಾಸಕ ಬೀಚನಹಳ್ಳಿ ಚಿಕ್ಕಣ್ಣ ಮಾತನಾಡಿ, ನೀವು ಎಲ್ಲದರೂ ಇರಿ, ಯಾವ ಪಕ್ಷದಲ್ಲೇ ಇರಿ, ನಾನು ಇದೇ ಪಕ್ಷಕ್ಕೆ ಮತ ನೀಡಿ ಎಂದು ಹೇಳುವುದಿಲ್ಲ. ಯಾವುದೇ ಪಕ್ಷದಲ್ಲಿ ಗೆದ್ದರೂ, ಶಾಸಕರಾದರೂ ಸಮಾಜದ ಪರವಾಗಿ ಇರಿ, ಸಮಾಜದ ಹಿತಾಶಕ್ತಿಗೆ, ಸಮಾಜದ ಏಳಿಗೆಗಾಗಿ ಎಲ್ಲರೂ ಒಟ್ಟಾಗಿ ಕೆಲಸ ಮಾಡಿ. ಎಲ್ಸಿ ಉತ್ತೀರ್ಣ ಆದ ತಕ್ಷಣ ನಮ್ಮ ಮಕ್ಕಳಿಗೆ ಕೆಲಸ ಕೊಡಿ ಎಂದು ಹೇಳಿದರೆ ಯಾರೂ ಕೆಲಸ ಕೊಡುವುದಿಲ್ಲ. ಮಕ್ಕಳಿಗೆ ಉನ್ನತ ವಿದ್ಯಾಭ್ಯಾಸ ಕೊಡಿಸಿ, ಅವಾಗ ಸಮಾಜ ಉದ್ಧಾರ ಆಗುತ್ತೆ ಎಂದು ಹೇಳಿದರು. ಜೆಡಿ–ಎಸ್ ಯುವ ಮುಖಂಡ ಜಯಪ್ರಕಾಶ್ ಚಿಕ್ಕಣ್ಣ ಮಾತನಾಡಿ, ತಮ್ಮ ಹಕ್ಕುಗಳಿಗಾಗಿ ಇತರೆ ಸಮುದಾಯದವರು ಹೋರಾಟ ಮಾಡುವಂತೆ ನಮ್ಮ ಸಮುದಾಯ ಕೂಡ , ಯುವಪೀಳಿಗೆಯ ಭವಿಷ್ಯದ ದೃಷ್ಟಿಯಿಂದ ನಮ್ಮ ಹಕ್ಕುಗಳಿಗಾಗಿ ಹೋರಾಟ ಮಾಡಬೇಕಾಗಿದೆ. ಮೀಸಲಾತಿ ಪ್ರಮಾಣ ಹೆಚ್ಚಳಕ್ಕೆ ಒತ್ತಾಯಿಸಿ ಶಾಸಕ ಅನಿಲ್ ಚಿಕ್ಕಮಾದು ಅವರು ಹೇಳಿದಂತೆ ಸರ್ಕಾರಕ್ಕೆ ಮನವಿ ಕೊಡುವುದರ ಜೊತೆಗೆ ಹೋರಾಟ ಕೂಡ ಅನಿವಾರ್ಯವಾಗಿದೆ. ಈ ನಿಟ್ಟಿನಲ್ಲಿ ನಮ್ಮ ಸಮಾಜದ ಮುಖಂಡರು ಚಿಂತಿಸಬೇಕಾಗಿದೆ ಎಂದು ಹೇಳಿದರು. ಸಭೆಯಲ್ಲಿ ಜೆಡಿಎಸ್ ಯುವ ಮುಖಂಡ ಜಯಪ್ರಕಾಶ್ ಚಿಕ್ಕಣ್ಣ, ಅಪ್ಪಣ್ಣ, ಮೈಸೂರು–ಚಾಮರಾಜನಗರ ಜಿಲ್ಲಾ ನಾಯಕ ಸಂಘದ ಅಧ್ಯಕ್ಷ ರಾಮಚಂದ್ರ, ಕಾರ್ಯದರ್ಶಿ ಕೆಂಪನಾಯಕ , ನಗರಸಭೆ ಸದಸ್ಯ ಸುರೇಶ, ಎಚ್.ಡಿ.ಕೋಟೆ ತಾಲೂಕು ನಾಯಕ ಸಂಘದ ಅಧ್ಯಕ್ಷ ಎಂ.ಸಿ.ದೊಡ್ಡನಾಯಕ, ಸರಗೂರು ತಾಲೂಕು ಅಧ್ಯಕ್ಷ ಪುರದಕಟ್ಟೆ ಬಸವರಾಜು, ತಾಲೂಕು ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಕಂಡಕ್ಟರ್ ಶಿವಣ್ಣ, ಮೈಸೂರು ವಿವಿ ಸಿಂಡಿಕೇಟ್ ಸದಸ್ಯ ಕ್ಯಾತನಹಳ್ಳಿ ನಾಗರಾಜು, ಮುಖಂಡರಾದ ಚಾಕಹಳ್ಳಿ ಕೃಷ್ಣ, ಜಿನ್ನಹಳ್ಳಿ ರಾಜನಾಯಕ, ಜಿಯಾರ ನಾಗನಾಯಕ, ಹಲಸೂರು ಶಂಭುಲಿಂಗ ನಾಯಕ, ಚಿಕ್ಕನಾಯಕ, ಸರಗೂರು ರವಿಕುಮಾರ್, ಉಪನ್ಯಾಸಕ ಶಿವಪ್ಪ ಕೋಟೆ, ನಿವೃತ್ತ ಪೊಲೀಸ್ ಅಧಿಕಾರಿ ಬಸವನಾಯಕ, ವಕೀಲ ನಾಗೇಶ್, ಆಗತ್ತೂರು ಅಂಕನಾಯಕ, ಸಮಾಜಸೇವಕ ನಿಂಗರಾಜು ಸೇರಿದಂತೆ ಎರಡು ತಾಲೂಕಿನ ಸಮಾಜದ ಮುಖಂಡರು ಉಪಸ್ಥಿತರಿದ್ದರು.

---

## ಗುಬ್ಬೇವಾಡ ಗ್ರಾಮದಲ್ಲಿ ನೂತನ ವಿದ್ಯುತ್ ವಿತರಣಾ ಕೇಂದ್ರಕ್ಕೆ ಚಾಲನೆ ನೀಡಿದ ಶಾಸಕ ಅಶೋಕ ಮನಗೂಳಿ ಆಶಯ

# ರೈತರಿಗೆ ಗುಣಮಟ್ಟದ ವಿದ್ಯುತ್ ವ್ಯವಸ್ಥೆ ನೀಡುವ ಮಹದಾಸೆ


■ ಉದಯರಶ್ಮಿ ದಿನಪತ್ರಿಕೆ

ಸಿಂದಗಿ: ಮೂಲ ಸೌಕರ್ಯದಿಂದ ವಂಚಿತವಾದ ಗುಬ್ಬೇವಾಡ ಗ್ರಾಮ ಹಾಗೂ ಸುತ್ತಮುತ್ತಲಿನ ಗ್ರಾಮಗಳ ಸತತ ಎರಡು ವರ್ಷಗಳ ಪ್ರಯತ್ನದಿಂದ ನೂತನ ವಿದ್ಯುತ್ ಕೇಂದ್ರ ನಿರ್ಮಾಣ ಮಾಡಿದ್ದು ಸಂತಸ ತಂದಿದೆ ಎಂದು ಶಾಸಕ ಅಶೋಕ ಮನಗೂಳಿ ಹೇಳಿದರು.

ಸಿಂದಗಿ ತಾಲೂಕಿನ ಗುಬ್ಬೇವಾಡ ಗ್ರಾಮದಲ್ಲಿ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ ವತಿಯಿಂದ ಗುಬ್ಬೇವಾಡ ಗ್ರಾಮದಲ್ಲಿ ನೂತನವಾಗಿ ನಿರ್ಮಾಣವಾದ 1*10 ಎಂ.ವ್ಹಿ.ಎ, 110/11 ಕೆವ್ಹಿ ವಿದ್ಯುತ್ ವಿತರಣಾ ಕೇಂದ್ರಕ್ಕೆ ಚಾಲನೆ ಹಾಗೂ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದ ಅವರು, ಈ ಭಾಗದ ರೈತರ ಹೋರಾಟದ ಫಲವಾಗಿ ಇಂದು ಈ ನೂತನ ವಿದ್ಯುತ್ ಕೇಂದ್ರ ತಲೆ ಎತ್ತಿ ನಿಂತಿದೆ. ರೈತರಿಗೆ ಗುಣಮಟ್ಟದ ವಿದ್ಯುತ್ ವ್ಯವಸ್ಥೆ ನೀಡುವ ಮಹದಾಸೆಯನ್ನು ಹೊಂದಿದ್ದೇನೆ. 5 ಗ್ಯಾರಂಟಿ ಯೋಜನೆಗಳನ್ನು ದಲ್ಲಾಳಿಗಳು ಇಲ್ಲದೇ ಜನರಿಗೆ ಸರಕಾರ ತಲುಪಿಸುತ್ತಿದೆ. ಸಮಸ್ಯೆಗೆ ಮೂಲ ಪರಿಹಾರಕ್ಕೆ ತಾಳ್ಮೆ ಮುಖ್ಯ. ಈ ವರ್ಷ ಕೊರಳ್ಳಿ ಗ್ರಾಮಕ್ಕೆ ಸರಕಾರಿ ಪಿಯು ಕಾಲೇಜು ನೀಡಿದ್ದಾರೆ. ಮುಂದಿನ ದಿನಮಾನಗಳಲ್ಲಿ ಗುಬ್ಬೇವಾಡ ಗ್ರಾಮಕ್ಕೂ ತರುವ ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ. ಈಗಾಗಲೇ ಸಿಂದಗಿ–ಕಲಕೇರಿ ರಸ್ತೆಗೆ ಈಗಾಗಲೇ ರೂ.6ಕೋಟಿ ಅನುದಾನಕ್ಕೆ ಪ್ರಸ್ತಾವನೆ ಸಲ್ಲಿಸಿದ್ದೇನೆ. ಈ ಭಾಗದ ಜನರಿಗೆ ಎಲ್ಲ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಪ್ರಾಮಾಣಿಕವಾಗಿ ಪ್ರಯತ್ನ ಮಾಡುತ್ತೇನೆ ಎಂದರು.

"ನೂತನ 110/11 ಕೆವ್ಹಿ ಕೇಂದ್ರ ನಿರ್ಮಾಣವಾಗುವುದರಿಂದ ಪಂಪ್ ಸೆಟ್ ಗಳು ಸುಟ್ಟು ಹೋಗದ ಹಾಗೆ ಆಗುತ್ತವೆ. ಹಗಲಿನಲ್ಲಿಯೇ ರೈತರಿಗೆ ಇನ್ನು ಮುಂದೆ ವಿದ್ಯುತ್ ಸರಬರಾಜು ಮಾಡಲಾಗುವುದು."

■ ಚಂದ್ರಕಾಂತ ನಾಯಕ
ಹೆಸ್ಕಾಂ ಎಇಇ, ಸಿಂದಗಿ



ಈ ವೇಳೆ ಬಾಗಲಕೋಟೆಯ ಕವಿಪ್ರನಿನಿ ಅದೀಕ್ಷಕ ಎಂಜನಿಯರ್ ರಮೇಶ ಪವಾರ ಪ್ರಾಸ್ತಾವಿಕವಾಗಿ ಮಾತನಾಡಿದರು. ಇದೇ ಸಂದರ್ಭದಲ್ಲಿ ಅಡಿವೇಶ್ವರ ಶ್ರೀಗಳು ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು. ಎಪಿಎಂಸಿ ನಿರ್ದೇಶಕ ಸದ್ದಾಂ ಪಟೇಲ, ರೈತ ಸಂಘದ ತಾಲೂಕಾಧ್ಯಕ್ಷ ಧರ್ಮಣ್ಣ ಗಬಸಾವಳಗಿ, ದೇವರಾಜ ನರಗೋದಿ, ಮುತ್ತುಗೌಡ ಪಾಟೀಲ ಮಾತನಾಡಿದರು.

ಈ ವೇಳೆ ವಿಜಯಪುರದ ಕವಿಪ್ರನಿನಿ ಯೋಜನಾ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್ ಜಗದೀಶ ಜಾಧವ, ಕಾರ್ಯಾಚರಣೆ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್ ವಾಹೀದ ಜಹಾಗೀರರಾದ, ಹೆಸ್ಕಾಂ ಎಇಇ ಚಂದ್ರಕಾಂತ ನಾಯಕ, ರಮೇಶ ಪವಾರ, ಸಂತೋಷ ಸಾಲಿ, ಎಸ್.ವಾಯ್ ಕೊಂಡಗೂಳಿ, ಬಸವರಾಜ ಮಾರಲಭಾವಿ, ಹುಸೇನಿ ತಾಂಬೊಳ್ಳಿ, ರಮೇಶ ಸಾವಳಸಂಗ, ಪ್ರಕಾಶ ಗೋಲಗೇರಿ, ವಿದ್ಯುತ್ ವಿತರಣಾ ಕೇಂದ್ರಕ್ಕೆ ಭೂದಾನ ಮಾಡಿದ ಬೋರಮ್ಮ ತಳವಾರ, ರಮೇಶ ಗುಬ್ಬೇವಾಡ, ನಿಂಗಪ್ಪ ಭಾವಿಕಟ್ಟಿ, ರಮೇಶ ಇಜೇರಿ, ಸಿದ್ದು ಅಂಗಡಿ ಸೇರಿದಂತೆ ಗುಬ್ಬೇವಾಡ ಗ್ರಾಮದ ಹಿರಿಯರು, ಪಕ್ಷದ ಮುಖಂಡರು ಹಾಗೂ ಹೆಸ್ಕಾಂ ಹಾಗೂ ಕರ್ನಾಟಕ ಪ್ರಸರಣ ನಿಗಮದ ಅಧಿಕಾರಿಗಳು ಮತ್ತು ಇತರರು ಇದ್ದರು.

### ವಿದ್ಯುತ್ ವಿತರಣಾ ಕೇಂದ್ರದಲ್ಲಿ ಸಿಡಿದ ಪಟಾಕಿಗಳು

ವಿದ್ಯುತ್ ವಿತರಣಾ ಕೇಂದ್ರದ ಉದ್ಘಾಟನಾ ಸಮಾರಂಭಕ್ಕೆ ಆಗಮಿಸಿದ ಶಾಸಕ ಅಶೋಕ್ ಮನಗೂಳಿ ಅವರಿಗೆ ಗುಬ್ಬೆವಾಡ ಗ್ರಾಮದ ಅವರ ಕಾರ್ಯಕರ್ತರು ವಿದ್ಯುತ್ ವಿತರಣಾ ಘಟಕದಲ್ಲಿಯೇ ಪಟಾಕಿ ಸಿಡಿಸಿದ್ದಾರೆ. ವಿದ್ಯುತ್ ವಿತರಣಾ ಘಟಕದಲ್ಲಿ ಅಗ್ನಿ ಅವಘಡವಾಗುವ ಸಾಧ್ಯತೆಗಳಿರುತ್ತವೆ. ಇಂತಹ ವಸ್ತುಗಳನ್ನು ಘಟಕದಲ್ಲಿ ತರುವಂತಿಲ್ಲ ಎಂದು ಅಧಿಕಾರಿಗಳು ಹೇಳುತ್ತಾರೆ. ಆದರೆ ಕೆಲ ಗ್ರಾಮಸ್ಥರು ಸುಮಾರು 5 ನಿಮಿಷಗಳ ಕಾಲ ಅಲ್ಲಿ ಪಟಾಕಿ ಸಿಡಿಸಿದರೂ ಅಧಿಕಾರಿಗಳು ತಡೆಯಲು ಮುಂದಾಗಲಿಲ್ಲ.



ನಮ್ಮೂ–ರಿಗೆ ಸರಕಾರಿ ಪಪೂ ಕಾಲೇಜು, ಪ್ರಾಥಮಿಕ ಆರೋಗ್ಯ ಕೇಂದ್ರ, ರಸ್ತೆ ಸುಧಾರಣೆ, ಸಾರ್ವಜನಿಕ ಶೌಚಾಲಯ ಸೇರಿದಂತೆ ಇನ್ನಿತರ ಸೌಲಭ್ಯಗಳನ್ನು ಶಾಸಕ ಅಶೋಕ ಮನಗೂಳಿ ಅವರು ಅತೀ ಶೀಘ್ರದಲ್ಲಿ ಮಂಜೂರು ಮಾಡಿಸಿ ಕೊಟ್ಟರೆ ನಮ್ಮ ಭಾಗದ ಜನರಿಗೆ ಅನುಕೂಲವಾಗುತ್ತದೆ."

■ ಬಾಪುಗೌಡ ಪಾಟೀಲ
ಗ್ರಾಮಸ್ಥರು, ಗುಬ್ಬೇವಾಡ

---

# ಸುಡುವ ಸೂರ್ಯನಿಗೊಂದು ಪತ್ರ

## ವೀಣಾಂತರಂಗ

■ ಉದಯರಶ್ಮಿ ದಿನಪತ್ರಿಕೆ

ಅಪ್ಪ ಜಗತ್ಪಾಲಕ ಸೂರ್ಯದೇವನೇ,

ನಿನಗೆ ಹೀಗೊಂದು ಪತ್ರ ಬರೆಯುವ ಪ್ರಮೇಯ ಬದುಕಿನಲ್ಲಿ ಬರುತ್ತದೆ ಎಂದು ಖಂಡಿತವಾಗಿಯೂ ಅಂದುಕೊಂಡಿರಲಿಲ್ಲ ಆದರೇನು ಮಾಡುವುದು?

ಇದೀಗ ನಿನಗೆ ಪತ್ರ ಬರೆಯಲೇಬೇಕಾದ, ಬರೆದು ಕ್ಷಮೆ ಕೇಳಿಕೊಳ್ಳಲೇಬೇಕಾದ ಕಾಲ ಕೂಡಿ ಬಂದಿದೆ.

ನೀನು ನಮ್ಮನ್ನು ಕ್ಷಮಿಸುವೆ ಎಂಬ ಭರವಸೆ ನನಗಿಲ್ಲ. ಆದರೆ ನಮ್ಮ ಸ್ವಯಂಕೃತ ಅಪರಾಧದ ತಪ್ಪೊಪ್ಪಿಗೆಯನ್ನು ನಿನ್ನ ಮುಂದೆ ಹೇಳಿಕೊಂಡು ನನ್ನ ಮನದ ಭಾರವನ್ನು ಹಗುರವಾಗಿಸಿಕೊಳ್ಳುವ ಆಶಯ ನನ್ನದು.

ನಮ್ಮ ಬದುಕನ್ನು ಬೆಳಗುವ ನಮ್ಮೆಲ್ಲ ದೈನಂದಿನ ಕೃತ್ಯಗಳಿಗೆ ಸಾಕ್ಷಿಯಾಗುವ ನಮಗೆ ಆಹಾರ ತಯಾರಿಸಿಕೊಳ್ಳಲು ಬೇಕಾಗುವ ಸಸ್ಯಗಳಿಗೆ ಸಂಜೀವಿನಿಯಾಗಿರುವ, ನಿನ್ನ ಅಸ್ತಿತ್ವವಿಲ್ಲದೆ ನಾವ್ಯಾರು ಇಲ್ಲ ಎಂಬ ಅರಿವನ್ನು ಹೊಂದಿದ್ದರೂ ಕೂಡ, ತಿಳಿದು ಕೂಡ ಅಜ್ಞರಂತೆ ವರ್ತಿಸುತ್ತಿರುವ ನಿನ್ನ ಮಕ್ಕಳ ತಪ್ಪು ಕ್ಷಮಿಸಲಾರದ ಮಹಾಪರಾಧ.. ನಿಜ.

ಕೇವಲ ನಾಲ್ಕೈದು ದಶಕಗಳ ಹಿಂದೆ ಉದ್ಯಮಗಳು ತೆವಳುತ್ತಿರುವ ಕಾಲದಲ್ಲಿ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸುವ ಅವಶ್ಯಕತೆ ಇತ್ತು.. ಇದೀಗ ಸರ್ಕಾರದ ಕಟ್ಟುನಿಟ್ಟಿನ ನಿಯಮಾವಳಿಗಳ ಚಾಪೆಯ ಕೆಳಗೆ ನುಸುಳುವ ಕಲೆ ಜನರಿಗೆ ಗೊತ್ತಾಗಿದೆ. ಮತ್ತೆ ಕೆಲವರು ರಂಗೋಲಿಯ ಕೆಳಗೆ ನುಸುಳುವ ಚಾಣಾಕ್ಷತೆಯನ್ನು ಕೂಡ ಹೊಂದಿದ್ದಾರೆ.. ಎಲ್ಲೋ ಒಬ್ಬಿಬ್ಬರು ಹೀಗೆ ಮಾಡಿದ್ದರೆ ನೀನು ಕೂಡ ಹೋಗಲಿ ಬಿಡು ಎಂದು ಕ್ಷಮಿಸಿ ಬಿಡುತ್ತಿದ್ದೆ ಅಲ್ವೇ?

ಆದರೆ ಉದ್ಯಮಗಳು ಉಗುಳುವ ಹೊಗೆಯನ್ನು ನಿನ್ನ ಅತಿ ನೇರಳೆ ಕಿರಣಗಳ ತಾಪವನ್ನು ತಡೆಯಲೆಂದು ಇರುವ ರಕ್ಷಾ ಕವಚ ಓಜೋನನ್ನು ಒಂದು ಇಡೀ ಆಸ್ಟ್ರೇಲಿಯಾ ಖಂಡದಷ್ಟು ಛಿದ್ರಗೊಳಿಸಿದ ಮೇಲೆ ನಿನಗೆ ಕೋಪ ಬರದಿದ್ದರೆ ಹೇಗೆ ?

ಉಣ್ಣುವ ತಟ್ಟೆಯನ್ನು ಛೇದ ಮಾಡುವಂತಹ ವಿಸ್ಮೃತಿ ನಮಗೇಕೆ ಬಂತು ಎಂದು ನಿನಗೆ ಕೋಪ ಬಂದಿದ್ದರೆ ಖಂಡಿತವಾಗಿಯೂ ಅದು ನಿನ್ನ ತಪ್ಪಲ್ಲ.

ಹಾಗೆಂದು ಎಲ್ಲ ತಪ್ಪನ್ನು ಉದ್ಯಮಗಳ ಮೇಲೆ, ಅವುಗಳು ಕಾರುವ ಕರಿ ಹೊಗೆಗಳ ಮೇಲೆ ಹಾಕಿ ನಾವು ಸಾಚಾ ಸಿದ್ಧಪ್ಪಗಳು ಎಂದುಕೊಂಡರೆ ಅದು ನಮ್ಮ ಮೂರ್ಖತನವಾದೀತು. ನಿನ್ನ ಈ ಪ್ರಕೋಪಕ್ಕೆ ನಾವು ಮನುಷ್ಯರು ಕೂಡ ನಮ್ಮ ತಪ್ಪಿನ ಸಿಂಹಪಾಲನ್ನು ಸಲ್ಲಿಸಿದ್ದೇವೆ.

ನಮ್ಮದೇ ಸಂತಾನವನ್ನು ಹೆಚ್ಚಿಸಿಕೊಳ್ಳುವ ನಮ್ಮದೇ ಬದುಕನ್ನು ಮತ್ತಷ್ಟು ಮಗದಷ್ಟು ಚೆನ್ನಾಗಿ ಕಟ್ಟಿಕೊಳ್ಳುವ ನಿಟ್ಟಿನಲ್ಲಿ ಕಾಡನ್ನು ಕಡಿದು ನಾಡಾಗಿಸಿದ್ದೇವೆ.. ಕಾಡಿನ ಪ್ರಾಣಿಗಳು ಅವು ಕೂಡ ನಿನ್ನ ಮಕ್ಕಳಲ್ಲವೇ ? ಅವುಗಳ ಮನೆಗೆ ಬೆಂಕಿ ಇಟ್ಟು ಅವರನ್ನು ನೆಲೆಗೇಡಿಯನ್ನಾಗಿಸಿ ನಾವು ಬೆಚ್ಚಗಿನ ಗೂಡಿನಲ್ಲಿ ಇರಲು ಸಾಧ್ಯವೇ? ಧಗೆಯ ಒಡಲೇ ನಮ್ಮ ಬದುಕು

ಆಗುತ್ತದೆ ಎಂಬ ಅರಿವಿಲ್ಲದೆ ಅಭಿವೃದ್ಧಿಯ ಹೆಸರಿನಲ್ಲಿ, ಮೂಲ ಸೌಕರ್ಯಗಳನ್ನು ಹೆಚ್ಚಿಸುವ ನೆವದಲ್ಲಿ ಕಾಡನ್ನು ನಾಶ ಮಾಡಿರುವುದು, ಗಿಡ ಮರಗಳಿಗೆ ಕೊಡಲಿಯ ಪ್ರಹಾರ ಮಾಡಿ ಅವುಗಳನ್ನು ಧರಾಶಾಹಿಯಾಗಿಸಿರುವುದು ನಮ್ಮದೇ ಸ್ವಯಂಕೃತ ಅಪರಾಧವಲ್ಲವೇ ?




ಒಳ್ಳೆಯ ಬೆಳೆ ಬೇಕು ಎಂಬ ಆಶಯ ತಪ್ಪಲ್ಲ ಆದರೆ ಕಿಸೀ ಬಿ ಕೀಮತ್ ಪರ್ ಎಂಬ ಹಿಂದಿಯ ಹೇಳಿಕೆಯಂತೆ ಖಂಡಿತವಾಗಿಯೂ ಅಲ್ಲ. ನಮ್ಮ ಹೆಚ್ಚಿನ ಅವಶ್ಯಕತೆಗಳನ್ನು ಪೂರೈಸಿಕೊಳ್ಳಲು ಅದೆಷ್ಟೇ ಕೆಳಮಟ್ಟಕ್ಕೆ ಇಳಿಯಲು ಮನುಷ್ಯ ಸಿದ್ದನಾಗಿದ್ದಾನೆ. ಉಳಿವಿಗಾಗಿನ ಈ ಹೋರಾಟದಲ್ಲಿ ಕೇವಲ ತನ್ನ ಉಳಿವಿನ ಕುರಿತು ಮಾತ್ರ ಯೋಚಿಸುತ್ತಿರುವ ಆತ ಅತಿಯಾದ ದುರಾಸೆಯಿಂದ ಭೂಮಿ ತಾಯಿಯ ಒಡಲಿಗೆ ವಿಷ ಹಾಕುತ್ತಿದ್ದಾನೆ. ಏನನ್ನಾದರೂ ತೆರುವ, ಎಷ್ಟನ್ನಾದರೂ ತೆರುವ ಮೂಲಕ ನಾವು ಫಲವತ್ತಾದ ಭೂಮಿ ತಾಯಿಯ ಮಡಿಲಿಗೆ ಹಾಲಾಹಲದಂತಹ ರಾಸಾಯನಿಕಗಳನ್ನು ಬೆರೆಸಿದರೆ ಆಕೆಯಾದರೂ ಹೇಗೆ ಸುಮ್ಮನಿದ್ದಾಳು ? ಅಮೃತದಂತಹ ಬದುಕನ್ನು ನಮಗೆ ಕೊಡಮಾಡಿರುವ ಭೂಮಿತಾಯಿಯ ಮಡಿಲಿನಲ್ಲಿ ಗರಿಕೆ ಹುಲ್ಲು ಕೂಡ ಬೆಳೆಯದಂತೆ ಬಂಜರು ಮಾಡಿ ಇದೀಗ ಗೋಳಿಟ್ಟರೆ ಏನು ಪ್ರಯೋಜನ ?

ಸಹಿಸಿ ಸಾಕಾದ ಆಕೆ ಕೂಡ ಧಗೆಯ ಒಡಲಾಗಿ ನಮಗೆ ಶಿಕ್ಷೆ ನೀಡುತ್ತಿದ್ದಾಳೆ.. ಇನ್ನು ಆಪೋಷನ ತೆಗೆದುಕೊಳ್ಳುವುದಷ್ಟೇ ಬಾಕಿ.

ಇನ್ನು ಭೂಮಿ ತಾಯಿಯ ಒಡಲಿಗೆ ನಾವು ಹಾಕಿದ ವಿಷ, ಕಾರ್ಖಾನೆಗಳ ರಾಸಾಯನಿಕಗಳು ನಾವು ಕುಡಿಯುವ ಗಂಗೆಯನ್ನು ಕಲುಷಿತಗೊಳಿಸಿದೆ. ತನ್ನ ಒಡಲಲ್ಲಿರುವ ಆಮ್ಲಜನಕವನ್ನು, ಲವಣ ಮತ್ತು ಖನಿಜಗಳನ್ನು ಪೋಷಕಾಂಶಗಳ ರೂಪದಲ್ಲಿ ನಮಗೆ ನೀರಿನ ಮೂಲಕ ನೀಡುವ, ನಾವೆಲ್ಲರೂ ಗಂಗಾಮಾತೆ ಎಂದು ಪೂಜಿಸುವ ಜಲವನ್ನು ಕಲುಷಿತಗೊಳಿಸಿದ ಮಹಾಪರಾಧ ಕೂಡ ನಮ್ಮದೇ. ನಾವು ಹುಲು ಮಾನವರಂತೆಯೇ ಜಲಚರಗಳು ಕೂಡ ನಿನ್ನ ಮಕ್ಕಳು.

ನಿನ್ನ ಒಡಲಿಗೆ ನಮ್ಮೆಲ್ಲ ಕಲ್ಮಶಗಳನ್ನು ಎಸೆಯುವ, ರಾಸಾಯನಿಕಗಳನ್ನು ಬೆರೆಸುವ, ನಿನ್ನೊಡಲನ್ನು ಮಲಿನಗೊಳಿಸುವ ನಿನ್ನಲ್ಲಿಯೇ ತಮ್ಮ ಬದುಕನ್ನು ಕಂಡುಕೊಂಡಿರುವ ನಿನ್ನ ಮಕ್ಕಳಾದ ಜಲಚರ ವಾಸಿಗಳಿಗೆ ಕೇಡು ಬಗೆಯುವ ನಮ್ಮ ಕುರಿತು ನಿನಗೆ ಪ್ರೀತಿಯಾದರೂ ಹೇಗೆ ಹುಟ್ಟೀತು ? ನಿನ್ನ ದ್ವೇಷಕ್ಕೂ ನಾವು ಅನರ್ಹರು ಎಂದು ಮಾತ್ರ ಹೇಳಬಲ್ಲೆ. ತಿಳಿಯದೆ ಮಾಡುವುದು ಮೂಢತನ ಎಂದಾದರೆ ತಿಳಿದು ಕೂಡ ಮಾಡುವ ನಮ್ಮ ಅಜ್ಞಾನಕ್ಕೆ ಬೆಲೆ ತೆರಬೇಕಾದವರು ನಾವೇ ಅಲ್ಲವೇ !



ಈ ಹಿಂದೆ ಪ್ರತಿಯೊಬ್ಬರ ಮನೆಗಳಲ್ಲಿ ಹಿತ್ತಲಿರುತ್ತಿತ್ತು ಅಲ್ಲಿ ದಿನಬಳಕೆಯ ತರಕಾ–ರಿಗಳ ಜೊತೆಗೆ ಹೂವು ಹಣ್ಣು ಗಳ ಗಿಡಮರಗಳ ಜೊತೆಗೆ ದೊಡ್ಡದಾದ ಹುಣಸೆ ಮರಗಳು ಕೂಡ ಇರುತ್ತಿದ್ದವು . ನಮ್ಮ ದೈನಂದಿನ ಅವಶ್ಯಕತೆಗಳನ್ನು ಪೂರೈಸಿ ಇತರರಿಗೆ ಕೊಡುವಷ್ಟು ಕೂಡ ವಿಶಾಲತೆ ನಮ್ಮದಾಗಿತ್ತು. ಆದರೆ ಆಧುನಿಕತೆಯ ಹೆಸ–ರಿನಲ್ಲಿ ಅಲಂಕಾರಿಕ ಗಿಡಗಳನ್ನು ಮಾತ್ರ ನೆಟ್ಟು ನೀರು ದೊರೆಯುವುದಿಲ್ಲ ಎಂಬ ನೆಪ ವಡ್ಡಿ ಗಿಡ ಮರಗಳಿಗೆ ಕೊಡಲಿ ಹಾಕಿರುವ ನಮ್ಮ ಬುದ್ಧಿಗೇಡಿತನಕ್ಕೆ ನೀನಾದರೂ ಏನು ಮಾಡುತ್ತಿ ?

ಆಗಲೂ ಕೂಡ ಬೇಸಿಗೆ ಇತ್ತು ಆದ–'ರೆ ದಿನದ ಕೆಲಸಗಳನ್ನು ಮಾಡಿ ಪೂರೈಸಿ ದಣಿದ ದೇಹ ಮನೆಯ ಹಿತ್ತಲಿನಲ್ಲಿ ಕಟ್ಟೆಯ ಮೇಲೆ ಮರದ ಕೆಳಗೆ ಬರಿ ನೆಲದ ಮೇಲೆ ಮಲಗಿದರು ಕೂಡ ಬೀಸುವ ಮರಗಳ ತಂಗಾಳಿ ನಮಗೆ ವಿಶ್ರಾಂತಿಯ ಜೊತೆಗೆ ನೆಮ್ಮದಿಯನ್ನು ಕೂಡ ನೀಡುತ್ತಿದ್ದವು.



ಈಗ ಮನೆ ಮನೆಗಳಲ್ಲಿ ಫ್ಯಾನ್‌ಗಳು, ಏರ್ ಕೂಲರ್ ಗಳು ಎಸಿಗಳ ಭರಾಟೆ ಇದೆ, ನಿಜ! ಆದರೆ ಭೂಮಿ ತಾಯಿಯ ಮಡಿಲಲ್ಲಿ ಬೆಳೆದ ಮರಗಳು ಕೊಡುವ ನೆರಳು ಮತ್ತು ಗಾಳಿಯನ್ನು ನೀಡಲು ಯಾರಿಂದಲೂ ಸಾಧ್ಯವಿಲ್ಲ. ನಮಗೆ ಶುದ್ಧ ಆಮ್ಲಜನಕವನ್ನು, ನೆರಳನ್ನು ಫಲ ಪುಷ್ಪಗಳನ್ನು ನೀಡುವ ಅಂತಹ ಮರಗಳನ್ನು ಬೇರು ಬಿಟ್ಟು ಕಾಂಪೌಂಡ್ ನಾಶ ಮಾಡುತ್ತವೆ ಎಂಬ ಕಾರಣಕ್ಕಾಗಿ ಕಡಿದೊಗೆದಿರುವ ನಾವು ಮನೆಯ ಯಾವ ಮೂಲೆಯಲ್ಲಿ ಹೋದರೂ ನೆಮ್ಮದಿಯ ನೆಳಲು ಕಾಣದೆ ನಿಟ್ಟುಸಿರು ಬಿಡುವಂತಹ ಪರಿಸ್ಥಿತಿ ನಮ್ಮದಾಗಿದೆ.

ಇನ್ನು ನಾವು ಬಳಸುವ ಎ.ಸಿ ಗಳು ವಾತಾವರಣದಲ್ಲಿ ಮೀಥೇನ್ ಅನಿಲವನ್ನು ಬಿಡುಗಡೆ ಮಾಡಿ ವಾಯು ಮಾಲಿನ್ಯವನ್ನು ಉಂಟು ಮಾಡುತ್ತವೆ. ಇದರ ಪ್ರಮಾಣ ಹೆಚ್ಚಿದಷ್ಟು ನಾವು ಮನುಷ್ಯರಿಗೆ ಅಪಾಯ



ತಪ್ಪಿದ್ದಲ್ಲ.

ಭೂಮಿಯನ್ನು ಮಾತ್ರವಲ್ಲ ಆಕಾಶವನ್ನು ಕೂಡ ನಮ್ಮ ಅತಿಯಾದ ದಾಹಕ್ಕೆ ಆಪೋಷಣೆ ತೆಗೆದುಕೊಂಡು ಅಲ್ಲೂ ಕೂಡ ವಾಯು ಮಾಲಿನ್ಯದ ಮೂಲಕ ಹಾಳು ಮಾಡಿರುವ ನಮ್ಮ ಮೌಢ್ಯತೆಯನ್ನು ಸಹಿಸುವುದು ನಿನಗೆ ಕೂಡ ಅಸಾಧ್ಯ ಅಲ್ಲವೇ ?

ಹೀಗೆ ನೆಲ,ಜಲ, ವಾಯುವನ್ನು ಹಾಳು ಮಾಡಿರುವ ನಾವು ಗಿಡ ಮರಗಳನ್ನು ಕಡಿದೊಗೆದು ಪರಿಸರವನ್ನು ನಾಶ ಮಾಡಿದ್ದೇವೆ. ಪರಿಣಾಮವಾಗಿ ವಾತಾವರಣದ ತಾಪಮಾನ ಹೆಚ್ಚಾಗಿದೆ. ಸಹಸ್ರಾರು ವರ್ಷಗಳಿಂದ ಒಂದು ಸೆಂಟಿಮೀಟರ್ ಇನ್ನಷ್ಟು ಕರಗದ ಬೃಹದಾಕಾರದ ಹಿಮದ ನೀರ್ಗಲ್ಲುಗಳು ಇನ್ನಿಲ್ಲದಂತೆ ಕರಗಿ ಹರಿಯುತ್ತಿವೆ ಪರಿಣಾಮವಾಗಿ ವಿಪರೀತ ಬಿಸಿಲು ಚಳಿ ಮಳೆಗಳ ತೊಂದರೆಗಳಿಂದ ನಾವು ನಲುಗುತ್ತಿದ್ದೇವೆ.

ನಮ್ಮ ಪೂರ್ವಜರು ನಮಗೆ ಸ್ವಚ್ಛ,ಶುದ್ಧವಾದ ಹಾಗೂ ಬದುಕಲು ಯೋಗ್ಯವಾದ ಪರಿಸರವನ್ನು ನೀಡಿದ್ದರು ಅದು ಅವರ ಕರ್ತವ್ಯವಾಗಿತ್ತು. ಈ ಭೂಮಿಯ ಪ್ರಜೆಗಳಾದ ನಾವುಗಳು ನಮ್ಮ ಮುಂದಿನ ಪೀಳಿಗೆಗೆ ಅಷ್ಟೇ ಬದುಕಲು ಯೋಗ್ಯವಾದ ವಾತಾವರಣವನ್ನು ಹೊಂದಿರುವ ಪರಿಸರವನ್ನು ಬಿಟ್ಟು ಕೊಡಬೇಕಾದ ಜವಾಬ್ದಾರಿ ಹೊತ್ತಿದ್ದು ಆ ನಿಟ್ಟಿನಲ್ಲಿ ಇನ್ನು ಮುಂದೆ ಯಾದರೂ ಕಾರ್ಯನಿರ್ವಹಿಸಲೇಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ.

ಈಗಾಗಲೇ ಆಗಿ ಹೋಗಿರುವ ಪ್ರಮಾದವನ್ನು ಸರಿಪಡಿಸಲು ಇಂದಿನಿಂದಲೇ ಕಾರ್ಯ ನಿರ್ವಹಿಸುತ್ತೇವೆ ಎಂಬ ಭರವಸೆಯನ್ನು ಭೂಮಿಯ ವಾಸಿಗಳಾದ ನಾವು ನಿನಗೆ ನೀಡುತ್ತೇವೆ. ಇನ್ನಾದರೂ ನಿನ್ನ ಕೋಪ ತಾಪವನ್ನು ಬದಿಗಿಟ್ಟು ಎಳೆಯ ಹದವಾದ ಬಿಸಿಲನ್ನು ಮಾತ್ರ ನಮಗೆ ನೀಡು. ನಿನ್ನ ಮಕ್ಕಳನ್ನು ಕಾಪಾಡು ಎಂದು ಕೇಳಿಕೊಳ್ಳುವ ನಿನ್ನ ಮಕ್ಕಳು

ಲೇಖನ.
ವೀಣಾ ಹೇಮಂತ್ ಗೌಡ ಪಾಟೀಲ್
ಮುಂಡರಗಿ
ಗದಗ ಜಿಲ್ಲೆ



# ಕ್ರಾಂತಿಕಾರಕ ಕವಿ ಸಾಹಿತಿ ಡಾ.ಬುದ್ದಣ್ಣ ಹಿಂಗಮಿರೆ

## ವ್ಯಕ್ತಿ - ವ್ಯಕ್ತಿತ್ವ (ಸಾಧಕರ ಬದುಕಿನ ಅವಲೋಕನ)

■ ಉದಯರಶ್ಮಿ ದಿನಪತ್ರಿಕೆ

ಕನ್ನಡ ಸಾರಸ್ವತ ಲೋಕದ ಒಂಟಿ ಸಲಗ ವಿಮರ್ಶಕ ಕವಿ ನಾಟಕಕಾರ ಅನುವಾದಕರು ಅಪರೂಪದ ಕ್ರಾಂತಿಕಾರಕ ಕವಿ ಸಾಹಿತಿ ಡಾ ಬುದ್ದಣ್ಣ ಹಿಂಗಮಿರೆ.

ಮೂಲತಃ ಬೆಳಗಾವಿ ಜಿಲ್ಲೆಯ ಅಥಣಿ ತಾಲ್ಲೂಕಿನ ರಾಜಾಪುರ ದಲ್ಲಿ ಸೆಪ್ಟೆಂಬರ್ 4 1933 ರಂದು ಜನಿಸಿದರು. ಅವರ ಈ ಗ್ರಾಮವು ಈಗ ಮಹಾರಾಷ್ಟ್ರದಲ್ಲಿದೆ.

ಅಥಣಿಯ ಕೆಎಲ್ಇ ಶಿಕ್ಷಣ ಸಂಸ್ಥೆಯಲ್ಲಿ ಕೆಲಸ ಮಾಡಿದ್ದರು. ಬಳಿಕ ಹುಬ್ಬಳ್ಳಿಯ ಕಾಡಸಿದ್ದೇಶ್ವರ ಕಾಲೇಜಿನಲ್ಲಿ ಕನ್ನಡ ಉಪನ್ಯಾಸಕರಾಗಿ, ಧಾರವಾಡ ಕರ್ನಾಟಕ ಕಾಲೇಜಿನ ಉಪನ್ಯಾಸಕರಾಗಿ ಬಳಿಕ ಕರ್ನಾಟಕ ವಿ.ವಿ.ಯ ಡಾ.ಆರ್.ಸಿ.ಹಿರೇಮಠ ಕನ್ನಡ ಅಧ್ಯಯನ ಪೀಠದ ಪ್ರಾಧ್ಯಾಪಕರಾಗಿ ವಿಭಾಗ ಮುಖ್ಯಸ್ಥರಾಗಿಯೂ ಕಾರ್ಯನಿರ್ವಹಿಸಿದ್ದರು.

ಬುದ್ಧಣ್ಣ ಹಿಂಗಮಿರೆ ಒಬ್ಬ ಕನ್ನಡದ ಕವಿ, ನಾಟಕಕಾರ, ವಿಮರ್ಶಕ ಮತ್ತು ಅನುವಾದಕರಾಗಿದ್ದು, ಇವರು ತಮ್ಮ ಶೋಕ ಕಾವ್ಯ ಕುರಿತ ಪ್ರಬಂಧಕ್ಕಾಗಿ ಪಿ ಎಚ್ ಡಿ ಪಡೆದಿದ್ದು, ರಷ್ಯನ್ ಭಾಷೆಯಲ್ಲೂ ಪರಿಣತಿ ಹೊಂದಿದ್ದರು. ಇವರ ಪ್ರಮುಖ ಕೃತಿಗಳಲ್ಲಿ 'ಹುಲ್ಲುಗೆಜ್ಜೆ', 'ಶಬ್ದ', 'ರಕ್ತ' ಮತ್ತು 'ತೀರ್ಪು', 'ಸಂಗೊಳ್ಳಿ ರಾಯಣ್ಣ' ಮುಂತಾದ ನಾಟಕಗಳು ಸೇರಿವೆ.

**ವಿದ್ಯಾಭ್ಯಾಸ ಮತ್ತು ವೃತ್ತಿಜೀವನ**

**ಲಿಂಗರಾಜ ಕಾಲೇಜು, ಬೆಳಗಾವಿಯಿಂದ ಬಿ.ಎ. ಪದವಿ.**

**ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡದಿಂದ ರಷ್ಯನ್ ಭಾಷೆಯಲ್ಲಿ ಎಂ.ಎ..**

**ಪುಣೆ ವಿಶ್ವವಿದ್ಯಾಲಯದಿಂದ ಕನ್ನಡದಲ್ಲಿ ಶೋಕ ಕಾವ್ಯ ಕುರಿತು ಎಂ.ಎ. ಮತ್ತು ಪಿ.ಎಚ್.ಡಿ..**

**ಅಥಣಿ, ನಿಪ್ಪಾಣಿ, ಹುಬ್ಬಳ್ಳಿ ಮತ್ತು ಧಾರವಾಡದ ಕರ್ನಾಟಕ ಕಲಾ ವಿದ್ಯಾಲಯದಲ್ಲಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದರು.**

**ಕರ್ನಾಟಕ ವಿಶ್ವವಿದ್ಯಾಲಯದ ಕನ್ನಡ ಅಧ್ಯಯನ ಪೀಠದಲ್ಲಿ ಪ್ರಾಧ್ಯಾಪಕರು ಮತ್ತು ವಿಭಾಗದ ಮುಖ್ಯಸ್ಥರಾಗಿ ನಿವೃತ್ತರಾದರು.**

**ಪ್ರಮುಖ ಕೃತಿಗಳು**

**ಕಾವ್ಯಗಳು: ಹುಲ್ಲುಗೆಜ್ಜೆ, ಶಬ್ದ, ರಕ್ತ.**

**ನಾಟಕಗಳು: ತೀರ್ಪು ಮತ್ತು ಇತರ ನಾಟಕಗಳು (ಜೀಸಸ್ ಕ್ರಿಸ್ತ್, ರಾಜಾ ಪುಲಕೇಶಿ, ಸಂಗೊಳ್ಳಿ ರಾಯಣ್ಣ ಇತ್ಯಾದಿ), ಸಂಗೊಳ್ಳಿ ರಾಯಣ್ಣ ಮತ್ತು ಇತರ ನಾಟಕಗಳು.**

**ಗೌರವಗಳು:**

**ಕನ್ನಡ ಸಾಹಿತ್ಯ ಅಕಾಡೆಮಿ ಪ್ರಶಸ್ತಿ.**

**ಸೋವಿಯತ್ ಲ್ಯಾಂಡ್ ಪ್ರಶಸ್ತಿ.**

**ಮೈಸೂರು ವಿಶ್ವವಿದ್ಯಾಲಯದ ಸುವರ್ಣ ಮಹೋತ್ಸವ ಪ್ರಶಸ್ತಿ.**

**ಇತರ ಕೊಡುಗೆಗಳು**

**ರಷ್ಯನ್ ಭಾಷಾ ಸಮ್ಮೇಳನಗಳಲ್ಲಿ ಭಾಗವಹಿಸಿದ್ದರು.**

ಆಕಾಶವಾಣಿಯ ರಾಷ್ಟ್ರೀಯ ಕವಿಗೋಷ್ಠಿಗಳಲ್ಲಿ ಭಾಗವಹಿಸಿದ್ದರು.

ಅಖಿಲ ಕರ್ನಾಟಕ ಸಾಹಿತ್ಯ ಸಮ್ಮೇಳನದಲ್ಲಿ ಕವಿಗೋಷ್ಠಿಯ ಅಧ್ಯಕ್ಷತೆ ವಹಿಸಿದ್ದರು.

ಸೋವಿಯತ್ ರಷ್ಯಾದ ವಿಚಾರಧಾರೆಗಳಿಂದ ಪ್ರಭಾವಿತರಾಗಿದ್ದ ಅವರು ವಿಶೇಷ ಆಸಕ್ತಿ ವಹಿಸಿ ರಷ್ಯನ್ ಕಲಿತು ಸುಮಾರು 10ಕ್ಕೂ ಅಧಿಕ ರಷ್ಯನ್ ಕವನ ಸಂಕಲನಗಳನ್ನು ಕನ್ನಡಕ್ಕೆ ಅನುವಾದಿಸಿದ್ದರು. ಆದ್ದ-ರಿಂದ ರಷ್ಯಾದ ಬೋಲ್ಸೆವಿಕ್ ನೇತೃತ್ವದ ಸೋವಿಯತ್ ಸರ್ಕಾರ ಬುದ್ದಣ್ಣ ಅವರಿಗೆ ಪುಷ್ಕಿನ್ ಪ್ರಶಸ್ತಿ ಪ್ರದಾನ ಮಾಡಿತ್ತು.

'ಬುದ್ಧ ಕಾವ್ಯ ದರ್ಶನ~ ಬರೆಯುವ ಮೂಲಕ ಬುದ್ಧನ ಕುರಿತ ಕನ್ನಡದ ಮೊಟ್ಟಮೊದಲ ಮಹಾಕಾವ್ಯ ಬರೆದ ಶ್ರೇಯವನ್ನು ತಮ್ಮದಾಗಿಸಿಕೊಂಡರು. ಶಬ್ದ ರಕ್ತ ಮಾಂಸ, ಹುಲ್ಲು ಹೆಜ್ಜೆ, ಹದ್ದುಗಳ ಹಾಡು ಸೇ-ರಿದಂತೆ ಹಲವು ಕವನ ಸಂಕಲನಗಳನ್ನು ಬರೆದಿದ್ದರು. ಅವರ ಹಲವು ಕವನಗಳು ಆಕಾಶವಾಣಿಯಲ್ಲಿ ಬಿತ್ತರವಾಗುತ್ತಿವೆ.

10 ವರ್ಷಗಳ ಕಾಲ ಕೇಂದ್ರ ಸಾಹಿತ್ಯ ಅಕಾಡೆಮಿ ಸದಸ್ಯರಾಗಿ, ಕರ್ನಾಟಕ ವಿದ್ಯಾವರ್ಧಕ ಸಂಘದ ಸಾಹಿತ್ಯ ಮಂಟಪದ ಸಂಚಾಲಕರಾಗಿ, ಹುಬ್ಬಳ್ಳಿಯ ಸಾಹಿತ್ಯ ಮಂಟಪದ ಅಧ್ಯಕ್ಷರಾಗಿಯೂ ಸೇವೆ ಸಲ್ಲಿಸಿದ್ದರು. ಮೊದಲ ಬಾರಿಗೆ 1972ರ 'ದಲಿತ~ ಪತ್ರಿಕೆ ಹೊರಡಿಸುವ ಮೂಲಕ ದಲಿತ ಸಂವೇದನೆ ಬರಹಗಾರರನ್ನು ಪ್ರೋತ್ಸಾಹಿಸಿದ್ದರು.



ರಷ್ಯಾ ದೇಶದ ಬಗ್ಗೆ ವಿಶೇಷ ಒಲವನ್ನು ಹೊಂದಿದ್ದ ಅವರು, ಪ್ರತಿ ಸಭೆಯಲ್ಲಿಯೂ ಭಾಷಣ ಮಾಡುವಾಗ ಮಾತು ರಷ್ಯಾದತ್ತ ಹೊರಳುತ್ತಿತ್ತು. ಸಮಾಜವಾದಿ ಸಿದ್ಧಾಂತ ಹಾಗೂ ಕಾರ್ಲ್‌ಮಾರ್ಕ್ಸ್, ವಿ.ಐ.ಲೆನಿನ್ ವಿಚಾರಧಾರೆಗಳಿಂದ ಪ್ರಭಾವಿತರಾಗಿದ್ದರು.

ಕರ್ನಾಟಕ–ಮಹಾರಾಷ್ಟ್ರ ಗಡಿಯ ಕೃಷ್ಣಾ ನದಿ ತೀರದ ರಾಜಾಪುರ ಎಂಬ ಕುಗ್ರಾಮ ಹಿಂಗಮಿರೆ ಅವರ ಹುಟ್ಟೂರು (ಜ: 1933). ಸ್ವಪ್ರಯತ್ನದಿಂದ ಶಿಕ್ಷಣ ಸಾಹಿತ್ಯದಂಥ ಸಂಸ್ಕಾರಗಳನ್ನು ರೂಢಿಸಿಕೊಂಡ ಅವರು, ಖಾಸಗಿ ನೋವು–ಆಘಾತಗಳ ನಡುವೆಯೂ ಬದುಕಿನ ಕುರಿತು ಅಪಾರ ಪ್ರೀತಿಯನ್ನು ಉಳಿಸಿಕೊಂಡು, ಎಲ್ಲರಿಗೂ ಪ್ರೀತಿಯನ್ನೇ ಹಂಚುತ್ತ, ತಾನೂ ಬೆಳೆದು ಇತರರನ್ನೂ ಬೆಳೆಸಿದರು.

ಸೋವಿಯೆತ್ ಲ್ಯಾಂಡ್ ನೆಹರು ಪ್ರಶಸ್ತಿ' ಪಡೆವವರೆಗೆ; ಸುಮಾರು ಕಾಲು ಶತಮಾನದಿಂದ ತಮ್ಮ ಅಂತರಂಗದಲ್ಲಿ ರೂಪುಗೊಳ್ಳುತ್ತ ನಡೆದ ದರ್ಶನವೊಂದಕ್ಕೆ ಬದುಕಿನ ಇಳಿಸಂಜೆಯಲ್ಲಿ 'ಬುದ್ಧ ಕಾವ್ಯ ದರ್ಶನ'ವೆಂಬ ಮಹಾಕಾವ್ಯದ ರೂಪು ಕೊಟ್ಟು, ಅದನ್ನು ಪ್ರಕಟಿಸಿಯೇ ಈ ಲೋಕದಿಂದ ನಿರ್ಗಮಿಸುವವರೆಗೆ ಬುದ್ದಣ್ಣ ಹಿಂಗಮಿರೆ ನಡೆದದ್ದು ನಿರಂತರ ಸಂಘರ್ಷದ ದಾರಿ.

ಅಥಣಿಯ ಹೈಸ್ಕೂಲೊಂದರಲ್ಲಿ ಮಾಸ್ತರ್ ಆಗಿದ್ದ ಹಿಂಗಮಿರೆಯವರ ಜ್ಞಾನದಾಹ ಅವರನ್ನು ಸಾಂಗಲಿಯಲ್ಲಿದ್ದ ರಂ.ಶ್ರೀ.ಮುಗಳಿಯವರ ಬಳಿ ಕೊಂಡೊಯ್ದಿತು. ಮುಗಳಿಯವರ ಮಾರ್ಗದರ್ಶನದಲ್ಲಿ ಪ್ರೌಢಪ್ರಬಂಧ ಬರೆದು ಪೂನಾ ವಿಶ್ವವಿದ್ಯಾಲಯದಿಂದ ಪಿಎಚ್.ಡಿ ಪದವಿ ಪಡೆದು ನಿಪ್ಪಾಣಿ, ಹುಬ್ಬಳ್ಳಿ–ಧಾರವಾಡದ ಕಾಲೇಜುಗಳಲ್ಲಿ, ಕರ್ನಾಟಕ ವಿಶ್ವವಿದ್ಯಾಲಯದಲ್ಲಿ ಅಧ್ಯಾಪಕರಾಗಿ, ಕನ್ನಡ ಎಂ ಎ ವಿದ್ಯಾರ್ಥಿಗಳಿಗೆ ಪಾಠ ಮಾಡುತ್ತಲೇ ವಿಶ್ವವಿದ್ಯಾಲಯದ ವಿದೇಶಿ ಭಾಷೆಗಳ ಅಧ್ಯಯನ ವಿಭಾಗದಲ್ಲಿ ರಷ್ಯನ್ ಭಾಷೆ–ಸಾಹಿತ್ಯದಲ್ಲಿ ಸ್ವತಃ ತಾವೂ ಎಂ.ಎ ಮಾಡಿದರು. ಮಾಸ್ಕೋನಗರದ ಪುಷ್ಕಿನ್ ಪ್ರತಿಮೆಯ ಬಳಿ ಸಾರ್ವಜನಿಕವಾಗಿ ಕವನವಾಚನ ಮಾಡುವವರೆಗೆ ಚಾಚಿಕೊಂಡ ಸುದೀರ್ಘ ಪಯಣವದು.

ವಿದ್ಯಾರ್ಥಿಗಳಲ್ಲಿ ಸುಪ್ತವಾಗಿರುವ ಸಾಹಿತ್ಯಾಸಕ್ತಿಗೆ ನೀರೆರೆಯುವ ಅವರ ಆಸಕ್ತಿಯ ಫಲವಾಗಿ ವಿ.ಕೃ.ಗೋಕಾಕರ ಕಾಲದಿಂದ ಕರ್ನಾಟಕ ಕಾಲೇಜಿನ ಕನ್ನಡ ಸಂಘದ ಭಾಗವಾಗಿದ್ದ ಕಮಲ ಮಂಡಲ' ಪ್ರಕಾಶನವನ್ನು ಮರುಜೀವಗೊಳಿಸಿದ ಅವರು, 'ಸ್ಪಂದನ'ಎಂಬ ಶೀರ್ಷಿಕೆಯಡಿ ವಿದ್ಯಾರ್ಥಿಗಳ ಕವನಸಂಗ್ರಹ ಹೊರತಂದರು. ಅದರಲ್ಲಿ ನನ್ನ ಕವಿತೆಗಳೂ ಸೇರಿದ್ದವು.

ಅದಕ್ಕೆ ಮೊದಲು, ಹುಬ್ಬಳ್ಳಿಯ ಕಾಡಸಿದ್ಧೇಶ್ವರ ಕಾಲೇಜಿನಲ್ಲಿ ಅಧ್ಯಾಪಕರಾಗಿದ್ದಾಗಲೂ 'ಸಾಹಿತ್ಯಮಂಟಪ ಎಂಬ ವೇದಿಕೆ ರೂಪಿಸಿ ಸರಜೂ ಕಾಟಕರ, ಸತೀಶ ಕುಲಕರ್ಣಿ, ಗವಿಸಿದ್ಧ ಬಳ್ಳಾರಿಯಂಥ ಕವಿಗಳು ಕಾವ್ಯಲೋಕವನ್ನು ಪ್ರವೇಶಿಸಲು ಅವಕಾಶ ಮಾಡಿಕೊಟ್ಟಿದ್ದರು.

ಇಂದಿರಾಗಾಂಧಿಯವರು ದೇಶದಲ್ಲಿ ತುರ್ತು ಪರಿಸ್ಥಿತಿಘೋಷಿಸಿದಪರಿಣಾಮವಾಗಿನೆಲೆಸಿದ್ದವಿಲಕ್ಷಣ ಮೌನದ ನಡುವೆಯೇ ಬಂಡಾಯ, ಸಮುದಾಯ, ರೈತ, ದಲಿತ ಮತ್ತಿತರ ಜನಪರ ಚಳವಳಿಗಳು ಧಾರವಾಡದಲ್ಲಿ ತಲೆ ಎತ್ತತೊಡಗಿದ್ದ ದಿನಗಳವು. ಮಾರ್ಕ್ಸಿಸ್ಟ್ ಚಿಂತನೆಯ ಪ್ರಭಾವಕ್ಕೊಳಗಾಗಿದ್ದ ನಾವು ಕೆಲವರು ಅದೇ ಒಲವಿನ ಹಿಂಗಮಿರೆ ಅವರೊಂದಿಗೆ ಒಡನಾಡುವದು ಸಹಜವಾಗಿತ್ತು.

ಒಂದೆಡೆ ಚಂದ್ರಶೇಖರ್ ಪಾಟೀಲರಂಥ ಸೋಷಲಿಸ್ಟರು ತುರ್ತುಸ್ಥಿತಿಯ ವಿರುದ್ಧ ದನಿ ಎತ್ತತೊಡಗಿದ್ದರೆ ಇನ್ನೊಂದೆಡೆ ಕಾದಂಬರಿಕಾರ ಬಸವರಾಜ ಕಟ್ಟೀಮನಿ, ವಿಮರ್ಶಕ ಶಂಕರ ಮೊಕಾಶಿ ಪುಣೇಕರ್ ಅಂಥ-'ವರು ತುರ್ತುಸ್ಥಿತಿಯನ್ನು ಸಮರ್ಥಿಸಿ ಇಂದಿರಾ ಭಜನೆ ಶುರು ಹಚ್ಚಿಕೊಂಡಿದ್ದರು.

ಹಿಂಗಮಿರೆಯವರು ತುರ್ತುಪರಿಸ್ಥಿತಿಯನ್ನು ಸಮರ್ಥಿಸಿದ್ದರು ಎಂಬುದಕ್ಕಿಂತ ಅವರು ಕಮ್ಯುನಿಜಂನಲ್ಲಿ ಆಸ್ಥೆಯುಳ್ಳವರಾಗಿದ್ದಕ್ಕೂ ಮತ್ತು ರಾಷ್ಟ್ರಮಟ್ಟದಲ್ಲಿ ಸಿಪಿಐ (ಭಾರತ ಕಮ್ಯುನಿಸ್ಟ್ ಪಕ್ಷ ) ಇಂದಿರಾಗಾಂಧಿ ವಿಧಿಸಿದ್ದ ತುರ್ತುಸ್ಥಿತಿಯನ್ನು ಬೆಂಬಲಿಸಿದ್ದಕ್ಕೂ ತಳಕು ಹಾಕಿ, ಹಿಂಗಮಿರೆಯವರನ್ನು ತುರ್ತುಸ್ಥಿತಿಯ ತಾತ್ವಿಕ ಬೆಂಬಲಿಗರೆಂಬಂತೆ ಬಿಂಬಿಸುವ ಲೋಹಿಯಾವಾದಿ ಸೋಷಲಿಸ್ಟರ ರೆಟರಿಕ್ಕೇ ಹೆಚ್ಚಾಗಿತ್ತು.

ತಮ್ಮ ಕುರಿತು ತಾವೇ ದೊಡ್ಡದಾಗಿ ಮಾತನಾಡಿಕೊಳ್ಳುವ ಜಾಯಮಾನದವರಲ್ಲದ ಹಿಂಗಮಿರೆ ತಮ್ಮಷ್ಟಕ್ಕೆ ತಾವು ಮೌನವಾಗಿ ಹಲವು ನಿಟ್ಟಿನಲ್ಲಿ ಕ್ರಿಯಾಶೀಲರಾಗಿದ್ದರು. ಅಂತಸ್ಸತ್ವದಲ್ಲಿ ನಿಜಕ್ಕೂ ಬಂಡಾಯಗಾರನಾದ ಮತ್ತು ಆ ಆಶಯದ ಕಾವ್ಯದ ಉತ್ತಮ ಪ್ರತಿನಿಧಿಯಾದ ಅವರು ಬಂಡಾಯ ಸಾಹಿತ್ಯ ಸಂಘಟಣೆಯ ವ್ಯಾಪ್ತಿಯೊಳಗೂ ಬರಲು ಬಯಸದೇ ತಮ್ಮ ಪಾಡಿಗೆ ತಾವಿದ್ದರು.

ದಲಿತ ಹೋರಾಟವೆಂಬುದು ಕರ್ನಾಟಕದಲ್ಲಿ ಸಂಘಟಿತವಾಗಿ ರೂಪಗೊಳ್ಳುವ ಮೊದಲೇ ಹಿಂಗಮಿರೆಯವರು ಚೆನ್ನಣ್ಣ ವಾಲೀಕಾರ್ ಮತ್ತು ಸೋಮಶೇಖರ್ ಇಮ್ರಾಪೂರ ಅವರನ್ನು ಜೊತೆ ಮಾಡಿಕೊಂಡು ದಲಿತ ಎಂಬ ನಿಯತಕಾಲಿಕೆಯ ಹಲವು ಸಂಚಿಕೆಗಳನ್ನು 1974ರಿಂದಲೇ ಹೊರತಂದಿದ್ದರು. ತೆಲುಗಿನ ದಿಗಂಬರ ಕಾವ್ಯ, ಮರಾಠಿ ದಲಿತಕಾವ್ಯ ಮತ್ತು ನಾಮದೇವ ಢಸಾಳರಂಥ ಪ್ರಖರ ದಲಿತ ಕವಿಗಳು ಕನ್ನಡಕ್ಕೆ ಪರಿಚಯವಾದದ್ದೇ ಅದರ ಮೂಲಕ.

1977ರಲ್ಲಿ ಅವರ ಮೂರನೇ ಕವನ ಸಂಗ್ರಹ ಹದ್ದುಗಳ ಹಾಡು'ಬಿಡುಗಡೆಯಾಯಿತು. ಆ ಮೊದಲು'ಹುಲ್ಲುಗೆಜ್ಜೆ (1962) ಹಾಗೂ ಶಬ್ದರಕ್ತ ಮತ್ತು ಮಾಂಸ' ( 1968) ಪ್ರಕಟವಾಗಿದ್ದವು. ಹುಲ್ಲುಗೆಜ್ಜೆಯಲ್ಲಿ'ಕಿವುಡು ಭೂಮಿಕುರುಡುಗಾಳಿ/ ಹುಲ್ಲು–ಗೆಜ್ಜೆನಿನದ/ಒಮ್ಮೆ ಹಸಿರು ಒಮ್ಮೆ ಬರಡು/ ಸುಖ ದುಃಖದ ಮೋದ ಎಂಬಂಥ ರೂಪಕಗಳು, ಅಗ್ನಿ–ಬಂಡೆ ಸುತ್ತುವರಿವ/ಇದೊ ಬದುಕಿನ ಭ್ರಮಣ/ ಸರಸ–ವಿರಸ ಸ್ವಪ್ನ ನೆಯ್ದು/ ಹಾಡುತ್ತಿಹ ಹರಣ ಎಂಬಂಥ ಸಾಲುಗಳು ಶಕ್ತ ಕವಿಯೊಬ್ಬನ ಆಗಮನವನ್ನು ನಿಸ್ಸಂದೇಹವಾಗಿ ಸಾರಿದ್ದವು. 'ಶಬ್ದ ರಕ್ತ ಮತ್ತು ಮಾಂಸ'ದಲ್ಲಿ ನಿಗಿ ನಿಗಿ ಉರಿಯುವ ಗುಣವುಳ್ಳ ರೂಪಕ– ಪ್ರತಿಮೆಗಳು, ಬಂಡುಕೋರ ಆಶಯಗಳು, ವಾಸ್ತವದ ಕ್ರೌರ್ಯಗಳು, ವಿಲಕ್ಷಣ ವ್ಯಂಗ್ಯ, ಸ್ಫೋಟಕ ಸತ್ವ ದಟ್ಟವಾಗಿ ಮೇಳೈಸಿವೆ.

ಸರಸ್ವತಿಯ ನಗ್ನಪುತ್ಥಳಿ ಸುತ್ತ ಹೂ ಸು-ರಿದು/ಸ್ವಚ್ಛಂದ ತುಳಿಯುತ್ತಿದ್ದೇವೆ ಹೊಸ ಲಯ,/ ಭಯ, ಶಂಕೆ, ಬಿರುಗಾಳಿ ಹೊರಕಟ್ಟಿ ತಂದು/ ಲಿಲಾವು ಮಾಡುತ್ತೇವೆ/ ರಕ್ತದಂಗಡಿ ಹೊಕ್ಕು ಲೂಟಿ ಮಾಡುತ್ತೇವೆ ಪ್ರತಿಮೆಗಳ' ಮುಂತಾದ ಸಾಲುಗಳು ಅಥವಾ 'ಶ್ರದ್ಧೆ ಬಚ್ಚಲಲ್ಲಿ ತೊಯ್ದ ಭ್ರಮಿಷ್ಟರು ನಾವಲ್ಲ/... ... .../ ಅಂಧೇರನಗರಿಯಾಳ್ವ ಅಪ್ರಾಮಾಣಿಕ ಗಣ-ಕ್ಕೆ/ ಇದೋ ಎತ್ತಿದ್ದೇವೆ ಕಪ್ಪುಧ್ವಜ'ದಂಥ ಸಾಲುಗಳು ಹಿಂಗಮಿರೆಯೆಂಬ ಕವಿಯೊಳಗೆ ಕುದಿಯುತ್ತಿದ್ದ ಅನುಭವ ಹಾಗೂ ಅದರ ಅಭಿವ್ಯಕ್ತಿಯ ಒತ್ತಡವನ್ನು ಸೂಚಿಸುತ್ತವೆ.



ಹದ್ದುಗಳ ಹಾಡು' ನವ್ಯತೆಯಿಂದ ಕಳಚಿಕೊಂಡು ಆನಂತರ ಎಂಬತ್ತರ ದಶಕದುದ್ದಕ್ಕೂ ಕನ್ನಡ ಕಾವ್ಯಲೋಕದಲ್ಲಿ ಸ್ವಲ್ಪ ವಾಚ್ಯವಾಗಿ ರಾರಾಜಿಸಿದ ದಲಿತ, ಬಂಡಾಯ ಇತ್ಯಾದಿ ನಾಮಾಂಕಿತ ಪ್ರವೃತ್ತಿಗಳ ಮುನ್ಸೂಚನೆಯಂಥ ಪದ್ಯಗಳನ್ನು ಒಳಗೊಂಡು ಪ್ರಕಟವಾಯಿತು. ಇಲ್ಲಿಯ ಪದ್ಯಗಳಲ್ಲಿ'ನೆಲದ ಹಾಡು' ಎಂಬುದು ಮುಖ್ಯವಾದುದು. ಅಡಿಗರ ಭೂಮಿಗೀತಕ್ಕಿಂತ ತೀರ ಭಿನ್ನವಾದ ನೆಲೆಯ ದರ್ಶನವನ್ನು ಈ ಕವಿತೆ ಪ್ರಕಟಿಸಿತು.

70–80ರ ದಶಕಗಳಲ್ಲಿ ಹಿಂಗಮಿರೆಯವರು ಬಹಳಷ್ಟು ಕಾವ್ಯ ಹಾಗೂ ವಿಮರ್ಶೆಯ ಕೃಷಿಯನ್ನು ಮಾಡಿದರು. ಪುಣೆ ವಿಶ್ವವಿದ್ಯಾಲಯದಿಂದ ಅವ-ರಿಗೆ ಡಾಕ್ಟರೇಟ್ ಪದವಿ ದೊರಕಿಸಿ ಕೊಟ್ಟ ಅವರ ಮಹಾಪ್ರಬಂಧ ಕನ್ನಡದಲ್ಲಿ ಶೋಕಕಾವ್ಯ 1976ರಲ್ಲಿ ಮೈಸೂರು ವಿ.ವಿ. ಕನ್ನಡ ಅಧ್ಯಯನ ಸಂಸ್ಥೆಯಿಂದ ಪ್ರಕಟವಾಯಿತು. ನವ್ಯಕಾವ್ಯ ವಿಮರ್ಶೆಯ ಕುರಿತಾದ ಇವರ ಕೃತಿ ಹೊಸಕಾವ್ಯ ಹೊಸದಿಕ್ಕು.

ಹಿಂಗಮಿರೆಯವರ ಸಂಪಾದಿತ ಕಾವ್ಯಕೃತಿಗಳೂ ಹಲವಾರಿವೆ. ಅವರು ಸಂಪಾದಿಸಿದ ಕಾವ್ಯಕೃತಿಗಳಲ್ಲಿ ಬಹುಮುಖ್ಯವಾದುದು ಹೊಸ ಜನಾಂಗದ ಕವಿತೆಗಳು' ಎಂಬ ಪ್ರಾತಿನಿಧಿಕ ಅಂಥಾಲಾಜಿ. ಇದು 1970ರಲ್ಲಿ ಪಿ.ಲಂಕೇಶ್ ಸಂಪಾದಿಸಿದ 'ಅಕ್ಷರ ಹೊಸ ಕಾವ್ಯ'ಕ್ಕೆ ಪ್ರತ್ಯುತ್ತರವಾಗಿ ಪ್ರಕಟವಾದದ್ದು.

ಲಂಕೇಶ್ ಸಂಪಾದಿತ ಕೃತಿಯಲ್ಲಿ ಅಡಕವಾದ ಕವಿತೆಗಳು ಸಂಪಾದಕರ ವೈಯಕ್ತಿಕ ಇಷ್ಟಾನಿಷ್ಟಗಳ ನೆಲೆಯಲ್ಲಿ ಆಯ್ಕೆಯಾದ ಕವಿಗಳ ಕವಿತೆಗಳೆಂಬುದು ಸ್ಪಷ್ಟವಿತ್ತು. ಅಲ್ಲಿದ್ದುದು ಆಯಾ ಕವಿಗಳ ಪ್ರಾತಿನಿಧಿಕ ಕವಿತೆಗಳಲ್ಲ ಮತ್ತು ಉತ್ತರ ಕರ್ನಾಟಕ ಭಾಗದ ಹಲವು ಸಶಕ್ತ ಕವಿಗಳಿಗೆ ಅದರಲ್ಲಿ ಪ್ರಾತಿನಿಧ್ಯ ದೊರೆತಿಲ್ಲವೆಂಬ ಕಾರಣಕ್ಕೆ ಹಿಂಗಮಿರೆಯವರು ಪಿ.ಲಂಕೇಶ್ ಅಕಾರಣವಾಗಿಯೋ ಸಕಾರಣವಾಗಿಯೋ ಹೊರಗಿಟ್ಟ ಕವಿಗಳ ಪೈಕಿ 29 ಕವಿಗಳ ಪ್ರಾತಿನಿಧಿಕವೆನ್ನಬಹುದಾದ ಕವಿತೆಗಳನ್ನು ಅದರ ಮರುವರ್ಷವೇ (1971) ಪ್ರಕಟಿಸಿದರು.

ವರ್ತಮಾನದ ಕಾವ್ಯದ ಕುರಿತ ಸಂಪಾದಕರ ನಿರ್ದಿಷ್ಟ ಪ್ರಶ್ನೆಗಳಿಗೆ ಈ ಎಲ್ಲ ಕವಿಗಳ ಅನಿಸಿಕೆಗಳನ್ನು ಪ್ರತಿನಿಧಿಸುವ ಉತ್ತರಗಳು ಮತ್ತು ಸಂಪಾದಕೀಯ ಪ್ರಸ್ತಾವನೆಯೊಂದಿಗೆ ಪ್ರಕಟವಾದ ಈ ಸಂಕಲನದ ಕವಿಗಳಲ್ಲಿ ಹಲವರು ಇಂದಿಗೂ ಸೃಜನಶೀಲ ಜೀವಂತಿಕೆ ಉಳಿಸಿಕೊಂಡಿದ್ದಾರೆ.

ನಾಟಕ ಹಿಂಗಮಿರೆಯವರು ಸಾಕಷ್ಟು ಕೃಷಿಗೈದ ಇನ್ನೊಂದು ಕ್ಷೇತ್ರ. ತೀರ್ಪು, ನೀಲಾಂಜನೆ, ಅಹಲ್ಯೆ, ಸಂಗೊಳ್ಳಿ ರಾಯಣ್ಣ ಅವರ ರಂಗಕೃತಿಗಳು. ಕಲಘಟಗಿ ಪರಿಸರದ ಗ್ರಾಮೀಣರ ಬದುಕಿನಲ್ಲಿ ಬದಲಾವಣೆ ತರುವ ಕಾರ್ಯಗೈದ, ಕರ್ನಾಟಕ ಶಾಸನಸಭೆಗೂ ಆಯ್ಕೆಯಾಗಿದ್ದ ಫಾದರ್ ಜೇಕಬ್ ಅವರನ್ನು ಆದ-'ರ್ಶೀಕರಿಸಿ'ದೀನದಲಿತರ ನಾಯಕ'ಎಂಬ ನಾಟಕವನ್ನು ಬರೆದರು.

ರಷ್ಯನ್ ಭಾಷೆಯ ಕಾವ್ಯದ ಅನುವಾದ ಮತ್ತು ರೂಪಾಂತರ ಹಿಂಗಮಿರೆ ಅವರ ಇನ್ನೊಂದು ಕೊಡುಗೆ. ಅಕ್ಷರ ಪ್ರಕಾಶನದಿಂದ ಹಿಂಗಮಿರೆಯವರ ರಷ್ಯನ್ ಹೊಸಕವಿತೆಗಳು (1973) ಪ್ರಕಟವಾಯಿತು. ಪುಷ್ಕಿನ್ ಅವರು ಜಿಪ್ಸಿಗಳ ಕುರಿತು ಬರೆದ ಖಂಡಕಾವ್ಯವೊಂದನ್ನು ನಾಟಕಕ್ಕೆ ರೂಪಾಂತರಿಸಿ 'ಅಲೆಮಾರಿಗಳು ಶೀರ್ಷಿಕೆಯಡಿ ಪ್ರಕಟಿಸಿದರು.

ಅವರ ಸೃಜನಶೀಲ ತುಡಿತಗಳ ಶಿಖರಪ್ರಾಯ ಕೃತಿಯಾಗಿ ಬುದ್ಧ ಕಾವ್ಯದರ್ಶನ ಮಹಾಕಾವ್ಯ (2003) ಪ್ರಕಟವಾಯಿತು. ಹಿಂಗಮಿರೆ ಆ ಕಾವ್ಯದ ಉದ್ದೇಶವನ್ನು ಹೇಳಿದ್ದು ಹೀಗೆ:'ಕಾಳು ತುಂಬಿ ಹೊಡೆಯೆತ್ತಿ ನಿಂತ ಹೊಳಿಸಾಲ ಭೂಮಿಯಂತೆ/ ತುಂಬಿ ಹರಿಯುವಾ ಕೃಷ್ಣೆ–ತುಂಗೆಯರ ತುಂಬು ಪಾತ್ರದಂತೆ/ ಬುದ್ಧಕಾವ್ಯ ರುಚಿ ಕಲ್ಲುಸಕ್ಕರೆಯ ಅಚ್ಚ ಹರಳಿನಂತೆ/ ಕೊರಡ ಕೊನರಿಸುವ ಭಾವ ಚಿಮ್ಮಿಸುವ ಜೀವಸತ್ವದಂತೆ..

ಸಾವಿರದ್ಯೆನೂರು ಚತುಷ್ಪದಿಗಳಿಂದ ಕೂಡಿ ಅರವತ್ತು ಅಧ್ಯಾಯಗಳಲ್ಲಿ ಬುದ್ಧನ ಬದುಕು ಸಂದೇಶದ ದರ್ಶನ ಮಾಡಿಸುವ ಈ ಛಂದೋಬದ್ಧ ಕೃತಿ ಎಚ್. ಆರ್. ಅಮರನಾಥ ಗುರುತಿಸಿದಂತೆ– ಮತಪ್ರಚಾರದ ಆವೇಶವಿಲ್ಲದ, ತತ್ಕಾಲೀನತೆಯ ತೆವಲಿಲ್ಲದ, ಜಾನಪದೀಯ ಸತ್ವವನ್ನೂ, ಭಾವಗೀತಾತ್ಮಕತೆಯನ್ನೂ ಹೊಂದಿದ, ಪೌರಾಣಿಕತೆಯನ್ನು ಕಳಚಿ ಇತಿಹಾಸ ಪ್ರಜ್ಞೆಯಿಂದ ನಿರ್ವಹಿಸಲ್ಪಟ್ಟ ಕಾವ್ಯ.

ಹಿರಿಯ ಮಗಳ ಬದುಕಿನ ಏರುಪೇರುಗಳ ದುಃಖ, ಇದ್ದ ಎರಡೂ ಗಂಡುಮಕ್ಕಳ ಅಕಾಲಿಕ ಮರಣದಂಥ ದುಃಖ ದುಮ್ಮಾನಗಳ ನಡುವೆಯೂ ತಮ್ಮ ಕ್ರಿಯಾಶೀಲತೆಯನ್ನು ಸತತವಾಗಿ ಉಳಿಸಿಕೊಂಡು ಕನ್ನಡ ಸಾಹಿತ್ಯಕ್ಕೆ ತಮ್ಮದೇ ಕೊಡುಗೆಯನ್ನು ಹಿಂಗಮಿರೆ ಅವರು ಕೊಟ್ಟಿದ್ದಾರೆ. ಹಲವು ಪ್ರಶಸ್ತಿಗಳು ಅವರಿಗೆ ಸಂದಿವೆ.

ಪುಷ್ಕಿನ್ ಕವಿತೆಗಳು ಕೃತಿಗೆ ಸೋವಿಯೆಟ್ ಲ್ಯಾಂಡ್ ನೆಹರೂ ಪಾರಿತೋಷಕ, ಹೊಸಕಾವ್ಯ ಹೊಸದಿಕ್ಕು ಕೃತಿಗೆ ಕರ್ನಾಟಕ ಸಾಹಿತ್ಯ ಅಕಾಡೆಮಿ ಪುರಸ್ಕಾರ ಮತ್ತು ಮೈಸೂರು ವಿಶ್ವವಿದ್ಯಾಲಯ ಸ್ವರ್ಣಮಹೋತ್ಸವ ಪ್ರಶಸ್ತಿ ಲಭಿಸಿವೆ. ಕರ್ನಾಟಕ ಸಾಹಿತ್ಯ ಅಕಾಡೆಮಿ ಗೌರವ ಪ್ರಶಸ್ತಿಗೂ ಅವರು ಭಾಜನರಾಗಿದ್ದಾರೆ.

ಹಲವಾರು ಮೌಲಿಕ ಕೃತಿಗಳನ್ನು ರಚಿಸಿದ ಹಿಂಗಮಿರೆಯವರ ಚಿಂತನೆ, ಬರವಣಿಗೆ ಕನ್ನಡ ಸಾಹಿತ್ಯ ವಿಮರ್ಶೆಯಲ್ಲಿ ಎಷ್ಟರ ಮಟ್ಟದಲ್ಲಿ ಚರ್ಚೆಯಾಯಿತು ಎಂಬುದನ್ನು ನೋಡಿದರೆ ನಿರಾಶೆಯಾಗುತ್ತದೆ.

ಕನಿಷ್ಠ ಪಕ್ಷ, ಕನ್ನಡ ಪುಸ್ತಕ ಪ್ರಾಧಿಕಾರ, ಸಾಹಿತ್ಯ ಅಕಾಡೆಮಿ–ಸಾಹಿತ್ಯ ಪರಿಷತ್ತಿನಂಥ ಸಾರ್ವಜನಿಕ ಸಂಸ್ಥೆಗಳು ಹಿಂಗಮಿರೆಯವರು ತಮ್ಮ ಹಣ ಹಾಕಿ ತಮ್ಮದೇ ಯುಗಧ್ವನಿ ಪ್ರಕಾಶನ'ದಿಂದ ಹೊರತಂದ ಸಹಸ್ರಾರು ಪುಟಗಳಷ್ಟಿರುವ ಸಾಹಿತ್ಯವನ್ನು ಸಮಗ್ರವಾಗಿ ಪ್ರಕಟಿಸುವ, ಅವರ ಸಾಹಿತ್ಯದ ಕು-ರಿತ ವಿಚಾರ–ವಿಮರ್ಶೆಗೆ ಚಾಲನೆಕೊಡುವ, ಅವರ 'ಬುದ್ಧಕಾವ್ಯದರ್ಶನ ಮಹಾಕಾವ್ಯದ ಜನಪ್ರಿಯ ಆವೃತ್ತಿಯನ್ನು ಪ್ರಕಟಿಸಿ ವಿತರಿಸುವ ಕೆಲಸಗಳನ್ನು ಕರ್ತವ್ಯಪ್ರಜ್ಞೆಯಿಂದ ಮಾಡಬೇಕಿದೆ.

**"ಋಜುಪಥವ ಹಿಡಿದೆ ಛಲ ಬಿಡದೆ**
**ರಾಜಿಯಾಗದೆ ನಿಜದ ನೇರಕೆ ನಡೆದೆ**
**ಬುದ್ಧದರ್ಶನಕೆ ಹುಲ್ಲು ಗೆಜ್ಜೆ ನಿನಾದಕೆ**
**ಮುಪ್ಪಿಲ್ಲ ಹಿಂಗಮಿರೆಯಿತ್ತ ಕಾವ್ಯಗೌರವಕೆ**
**ಮಣಿಹವಿದು ನೀ ಗೈದ ಸೃಷ್ಟಿ ಸಾಮರ್ಥ್ಯಕೆ'**

ಕನ್ನಡದ ಖ್ಯಾತ ಕವಿ, ವಿಮರ್ಶಕ ಡಾ.ಬುದ್ದಣ್ಣ ಹಿಂಗಮಿರೆಯವರಿಗೆ ಅರ್ಪಿತವಾದ ಜನಪರ' (2011, ಸಂ: ಶಿವಾನಂದ ಗಾಳಿ) ಎಂಬ ಅಭಿನಂದನಾ ಗ್ರಂಥ-'ದಲ್ಲಿ ಪ್ರೊ. ಹಂಪನಾ ಅವರು ಬರೆದ ಕವಿತೆಯೊಂದರ ಸಾಲುಗಳಿವು. ಹಿಂಗಮಿರೆಯವರ ವ್ಯಕ್ತಿತ್ವ ಮತ್ತು ಸಾಹಿತ್ಯಕ್ಕೆ ಸಮನಾಗಿಯೇ ಸಂದ ಹೃದಯಸ್ಪರ್ಶಿ ಶ್ರದ್ಧಾಂಜಲಿ ಇದು.

ಭೂತವರ್ತಮಾನಗಳನಿರಂತರಚಿಂತನೆವೈಚಾ-ರಿಕ ಸಾಹಿತ್ಯದ ಕಡೆಗೆ ತುಡಿತ ಭವಿಷ್ಯ ನಿರ್ಮಾಣದಲ್ಲಿ ಜೀವ ಪಣವಿಟ್ಟು ದುಡಿದ ಶ್ರಮಿಕರ ಪ್ರತಿನಿಧಿ. ಬುದ್ಧ ಬಸವ ಮಾರ್ಕ್ಸರನ್ನು ಲೋಹಿಯಾರರನ್ನು ಓದಿಕೊಂಡು ಸಮಾಜವಾದ ಚಿಂತನೆಯಲ್ಲಿ ತಮ್ಮ ಸಾಹಿತ್ಯವನ್ನು ರಚಿಸಿ ಒಂದು ಸುಂದರ ವೈಚಾರಿಕ ಸಮಾಜವನ್ನು ಕಟ್ಟಿ ಕನ್ನಡದ ಋಣ ತೀರಿಸಿದ ದಿಟ್ಟ ಸಾಹಿತಿ ಆಗಸ್ಟ್ 17, 2012 ರಂದು ಧಾರವಾಡದಲ್ಲಿ ನಿಧನರಾದರು. ತಾವೂ ಬರೆದು ಉಳಿದವರನ್ನು ಬರೆಸಿ ಬೆಳೆಸಿ ನಿರಂತರ ಕನ್ನಡದ ಅಪ್ರತಿಮ ಸಾಹಿತಿಗೆ ನನ್ನ ನುಡಿ ನಮನಗಳು.

ಲೇಖನ.
ಡಾ. ಶಶಿಕಾಂತ ಪಟ್ಟಣ
ರಾಮದುರ್ಗ – ಪುಣೆ
ಮೊ: 9552002338



## ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಸಚಿವ ಎಂ.ಬಿ.ಪಾಟೀಲ ಹೇಳಿಕೆ

# ಬಬಲೇಶ್ವರ ಕ್ಷೇತ್ರದ ಸರಕಾರಿ ಶಾಲೆಗಳಿಗೆ ಕ್ರೀಡಾ ಸಲಕರಣೆ ಸೌಲಭ್ಯ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಆರು ತಿಂಗಳಲ್ಲಿ ಬಬಲೇಶ್ವರ ಮತಕ್ಷೇತ್ರದ ಎಲ್ಲ ಸರಕಾರಿ ಶಾಲೆಗಳಿಗೆ ಸಿ.ಎಸ್.ಆರ್ ಅನುದಾನದಡಿ ಕ್ರೀಡಾ ಸಲಕರಣೆ ಸೌಲಭ್ಯ ಸಿಗಲಿವೆ ಎಂದು ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ ತಿಳಿಸಿದ್ದಾರೆ.

ಅವರು ರವಿವಾರ ಮುಸ್ಸಂಜೆ ಬಬಲೇಶ್ವರ ತಾಲೂಕಿನ ಮದಗುಣಕಿ ಬಳಿ ಲೋಕೋಪಯೋಗಿ ಇಲಾಖೆಯ ವತಿಯಿಂದ ರೂ. 150 ಲಕ್ಷ ವೆಚ್ಚದ ಶಿವಣ್ಣವರ ವಸ್ತಿಯಿಂದ ಕೊಡಬಾಗಿವರೆಗಿನ ರಸ್ತೆ ಕಾಮಗಾರಿ ಮತ್ತು ಸಮಾಜ ಕಲ್ಯಾಣ ಇಲಾಖೆ ವತಿಯಿಂದ ರೂ. 50 ಲಕ್ಷ ವೆಚ್ಚದ ಸಿಸಿ ರಸ್ತೆಗೆ ಭೂಮಿಪೂಜೆ ಹಾಗೈ ಕೆ.ಎಸ್.ಐ.ಐ.ಡಿ.ಸಿ ಸಿ.ಎಸ್.ಆರ್ ಅನುದಾನದಲ್ಲಿ ಅಂದಾಜು ರೂ. 60 ಲಕ್ಷ ವೆಚ್ಚದಲ್ಲಿ ನಿರ್ಮಿಸಲಾಗಿರುವ ಶಾಲಾ ಕಟ್ಟಡ ಉದ್ಘಾಟಿಸಿ ಅವರು ಮಾತನಾಡಿದರು.

ಬಬಲೇಶ್ವರ ಮತಕ್ಷೇತ್ರದಲ್ಲಿ ಸಿಎ□□□ರ್ ಅನುದಾನದಡಿ ಈಗಾಗಲೇ 100 ಸರಕಾರಿ ಶಾಲೆಗಳಿಗೆ ಕ್ರೀಡಾ ಸಲಕರಣೆ ನೀಡಲಾಗಿದೆ. ಬಾಕಿ 100 ಸರಕಾರಿ ಶಾಲೆಗಳಿಗೆ ಆರು ತಿಂಗಳೊಳಗೆ ಕ್ರೀಡಾ ಸಲಕರಣೆ ಒದಗಿಸಲಾಗುವುದು. ಅಷ್ಟೇ ಅಲ್ಲ, ಈ ಅನುದಾನದಲ್ಲಿ ಸುಂದರ ಶಾಲಾ ಕೊಠಡಿಗಳ ನಿರ್ಮಾಣ, ಸ್ಮಾರ್ಟ್ ಕ್ಲಾಸ್, ಶೌಚಾಲಯ ನಿರ್ಮಾಣ, ಕ್ರೀಡಾ ಸಲಕರಣೆಗಳನ್ನು ಒದಗಿಸಲಾಗುತ್ತಿದೆ. ಗ್ರಾಮೀಣ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಒದಗಿಸಲು ಈ ಕ್ರಮ ಕೈಗೊಳ್ಳಲಾಗಿದೆ. ಸ್ಮಾರ್ಟ್ ಕ್ಲಾಸ್ ಸೌಲಭ್ಯವನ್ನು ಹಂತಹಂತವಾಗಿ 5 ರಿಂದ 7ನೇ ತರಗತಿವರೆಗೆ ವಿಸ್ತರಿಸುವ ಯೋಜನೆಯಿದೆ. ಶಿಕ್ಷಕರೂ ಕೂಡ ವಿದ್ಯಾರ್ಥಿಗಳಿಗೆ ಒಳ್ಳೆಯ ಬೋಧನೆ ಮಾಡಬೇಕು. ಪೋಷಕರು ಲಿಂಗ ತಾರತಮ್ಯವಿಲ್ಲದೇ ತಮ್ಮ ಮಕ್ಕಳಿಗೆ ಶಿಕ್ಷಣ ನೀಡಬೇಕು ಎಂದು ಸಚಿವರು ತಿಳಿಸಿದರು. ಅಂತರ್ಜಲ ಹೆಚ್ಚಿಸಲು ಕಾಲುವೆಗಳಿಂದ ಹಳ್ಳಗಳಿಗೆ ನೀರು ತುಂಬಿಸಲಾಗುತ್ತಿದೆ. ಹೈನುಗಾರಿಕೆಗೆ ಉತ್ತೇಜನ ಅಕ್ಷಯಕಲ್ಪ ಸಂಸ್ಥೆಯೊಂದಿಗೆ ಒಡಂಬಡಿಕೆ ಮಾಡಿಕೊಳ್ಳಲಾಗಿದ್ದು, ಪೈಲಟ್ ಯೋಜನೆ ಉತ್ತಮ ಫಲಿತಾಂಶ ನೀಡುತ್ತಿದೆ. ರೈತರ ಆದಾಯ ದುಪ್ಪಟ್ಟು ಮಾಡಲಾಗುತ್ತಿದೆ. ಭವಿಷ್ಯದಲ್ಲಿ ಕೃಷಿ ಮಾಡುವ ಯುವಕರಿಗೆ ಬೇಡಿಕೆ ಹೆಚ್ಚಾಗಲಿದೆ. ಇದಕ್ಕೆ ಪೂರಕವಾಗಿ ಆಹಾರ ಸಂಸ್ಕರಣೆ ಘಟಕಗಳ ಸ್ಥಾಪನೆ, ನಾನಾ ಕಾರ್ಖಾನೆಗಳ ಸ್ಥಾಪನೆಗೆ ಆದ-'ತೆ ನೀಡಲಾಗಿದೆ ಎಂದು ಸಚಿವ ಎಂ. ಬಿ. ಪಾಟೀಲ ತಿಳಿಸಿದರು.

ಇದೇ ವೇಳೆ ಪಿಯುಸಿ ಪರೀಕ್ಷೆಯಲ್ಲಿ ಅತೀ ಹೆಚ್ಚು ಅಂಕಗಳನ್ನು ಪಡೆದ ವಿದ್ಯಾರ್ಥಿಗಳನ್ನು ಮತ್ತು ಶಾಲೆಗೆ ಭೂಮಿ ದಾನ ಮಾಡಿದ ಮಲ್ಲಪ್ಪ ಶಿವಣ್ಣವರ ಮತ್ತು ಧರೆಪ್ಪ ಶಿವಣ್ಣವರ ಸಹೋದರರನ್ನು ಸಚಿವ ಎಂ. ಬಿ. ಪಾಟೀಲ ಅವರು ಸನ್ಮಾನಿಸಿ ಗೌರವಿಸಿದರು.

ಈ ಸಂದರ್ಭದಲ್ಲಿ ಮಮದಾಪುರ ಶ್ರೀ ಅಭಿನವ ಮುರುಗೇಂದ್ರ ಸ್ವಾಮೀಜಿ, ಮುಖಂಡರಾದ ಮುತ್ತಪ್ಪ ಶಿವಣ್ಣವರ, ಕೆ. ಎಚ್. ಮುಂಬಾರಡ್ಡಿ, ಸೋಮಶೇಖರ ಪಾಟೀಲ, ಹಣಮಂತ ಸೊನ್ನದ, ಉಮೇಶ ಮಲ್ಲಣ್ಣವರ, ಬಸವರಾಜ ಪಾಟೀಲ, ಪರಮಾನಂದ ಚಲವಾದಿ, ಬಸವರಾಜ ಬೊಮಾರ, ಹಣಮಂತ ಛಲವಾದಿ, ಎಂ. ಕೆ. ಶಿವಣ್ಣವರ, ಕಲ್ಲಪ್ಪ ಶಿವಣ್ಣವರ, ಲೋಕೋಪಯೋಗಿ ಇಲಾಖೆ ಎಇಇ ಪ್ರಮೋದಕುಮಾರ ಹಟ್ಟಿ, ಎಇ ವಿಜಯ ಹಿರೇಮಠ, ಕೆ.ಆರ್.ಐ.ಡಿ.ಎಲ್ ಎಇಇ ಪ್ರವೀಣ ಮಠಪತಿ, ವಿಜಯಪುರ ಗ್ರಾಮೀಣ ವಲಯದ ಕ್ಷೇತ್ರ ಶಿಕ್ಷಣಾಧಿಕಾರಿ ಬಸವರಾಜ ತಳವಾರ, ಶಿಕ್ಷಣಾಧಿಕಾರಿ ವಸಂತ ಚವ್ಹಾಣ, ಗ್ರಾಮದ ಹಿರಿಯರು, ಮಹಿಳೆಯರು ಯುವಕರು ಉಪಸ್ಥಿತರಿದ್ದರು.

## ಎಕ್ಸಲಂಟ್ ಕಾಲೇಜಿನಲ್ಲಿ ನಡೆದ ಬ್ರಿಡ್ಜ್‌ಕೋರ್ಸ್ ಉದ್ಘಾಟನೆ ಕಾರ್ಯಕ್ರಮದಲ್ಲಿ ಪ್ರಾಂಶುಪಾಲ ಮಂಜುನಾಥ ಜುನಗೊಂಡ ಅಭಿಮತ

# ಶೈಕ್ಷಣಿಕ ಸವಾಲುಗಳನ್ನು ಎದುರಿಸಲು ಸೇತುಬಂಧ ಸಹಕಾರಿ




■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಸೇತುಬಂಧ ಕಾರ್ಯಕ್ರಮವು ಶೈಕ್ಷಣಿಕ ಸವಾಲುಗಳನ್ನು ಎದುರಿಸಲು ವಿದ್ಯಾರ್ಥಿಗಳನ್ನು ಸನ್ನದ್ಧಗೊಳಿಸುತ್ತದೆ. ನಿಮ್ಮ ಬದುಕಿನಲ್ಲಿರುವ ನಿರಾಸೆಯ ಸಂಹಾರವಾಗಿ ಸಾಧನೆಯ ಸಾಕಾರ ಮಾಡಿಸುತ್ತದೆ ಎಂದು ಪ್ರಾಂಶುಪಾಲ ಮಂಜುನಾಥ ಮ. ಜುನಗೊಂಡ ಹೇಳಿದರು.

ನಗರದ ಎಕ್ಸಲಂಟ್ ವಿಜ್ಞಾನ ಪದವಿ ಪೂರ್ವ ಕಾಲೇಜಿನಲ್ಲಿ ಆಯೋಜಸಲಾಗಿದ್ದ 2026–27 ನೇ ಸಾಲಿಗೆ ದಾಖಲಾತಿ ಪಡೆದುಕೊಂಡ ಪಿಯುಸಿ ಪ್ರಥಮ ವರ್ಷದ ವಿದ್ಯಾರ್ಥಿಗಳ ಬ್ರಿಡ್ಜಕೋರ್ಸ ಉದ್ಘಾಟನೆ ಹಾಗೂ ಶಾರದಾಮಾತೆಯ ಪೂಜಾ ಕಾರ್ಯಕ್ರಮದ ಕುರಿತು ಮಾತನಾಡಿದ ಅವರು;ಸೇತುಬಂದಕಾರ್ಯಕ್ರಮವುಇಂದಿನ ಕ್ಷಣಗಳನ್ನು ಮುಂದಿನ ಬದುಕಿನೊಂದಿಗೆ ಬೆಸೆಯುವ ಕಾರ್ಯಕ್ರಮವಾಗಿದೆ. ಮಕ್ಕಳಲ್ಲಿ ಅಡಗಿರುವ ಸುಪ್ತವಾದ ಅಂತಃಶಕ್ತಿಯನ್ನು ಜಾಗೃತಗೊಳಿಸಿ ವಿಜ್ಞಾನ ವಿಭಾಗದಲ್ಲಿ ಬರುವ ಸವಾಲುಗಳನ್ನು ಎದುರಿಸುವುದಕ್ಕೆ ತಯಾರು ಮಾಡುವ ಗರಡಿ ಮನೆಯಾಗಿದೆ ಎಂದರು.


ಶೈಕ್ಷಣಿಕ ಸಂಯೋಜಕ ಹಾಗೂ ಗಣಿತ ವಿಭಾಗದ ಮುಖ್ಯಸ್ಥ ಮಂಜುನಾಥ ತುಮ್ಮರಮಟ್ಟಿ ಮಾತನಾಡಿದರು.

ಲಾಂಗ್ ಟರ್ಮ ವಿಭಾಗದ ಶೈಕ್ಷಣಿಕ ಸಂಯೋಜಕ ಯಗ್ನೇಶ, ಭೌತಶಾಸ್ತ್ರ ವಿಭಾಗದ ಮುಖ್ಯಸ್ಥ ರೇವಣಸಿದ್ದಪ್ಪ ರಾಜಾಪೂರ, ರಸಾಯನಶಾಸ್ತ್ರ ವಿಭಾಗದ ಮುಖ್ಯಸ್ಥ ಪ್ರಭು ರೇಷ್ಮೆ, ಜೀವಶಾಸ್ತ್ರ ವಿಭಾಗದ ಮುಖ್ಯಸ್ಥ ಮಂಜುನಾಥ ನಿಂಬಿಕಾಯಿ, ಕನ್ನಡ ವಿಭಾಗದ ಮುಖ್ಯಸ್ಥ ಶರಣಗೌಡ ಪಾಟೀಲ್, ಹಿಂದಿ ವಿಭಾಗದ ಮುಖ್ಯಸ್ಥೆ ನೇತ್ರಾವತಿ ಕನಮಡಿ ಉಪಸ್ಥಿತರಿದ್ದರು.

ಸೌಜನ್ಯಾ ಚಿಣ್ಣನಗೌಡರ್ ಪ್ರಾರ್ಥಿಸಿದರು, ಆಂಗ್ಲ ಉಪನ್ಯಾಸಕ ಮುಸ್ತಾಕ್ ಮಲಘಾಣ ನಿರೂಪಿಸಿದರು.

# ಕೊಪ್ಪಳ ಹನುಮಂತ ಹಳ್ಳಿಕೇರಿಗೆ ರೂ.4ಲಕ್ಷ ಪರಿಹಾರ ಮಂಜೂರು

■ ಉದಯರಶ್ಮಿ ದಿನಪತ್ರಿಕೆ



**ಮಂಜೂರು ಮಾಡಿದ ಸಿಎಂ ಸಿದ್ದರಾಮಯ್ಯಅವರಿಗೆ, ಈ ನಿಟ್ಟಿನಲ್ಲಿ ಸಹಕಾರ ನೀಡಿದ। ಸಿಎಂ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ್ ಅವರಿಗೆ ಕೆಯುಡಬ್ಲ್ಯೂಜೆ ಧನ್ಯವಾದ**

ಬೆಂಗಳೂರು: ಕೊಪ್ಪಳ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷರಾದ ಹನುಮಂತಪ್ಪ ಹಳ್ಳಿಕೇರಿ ಅವರಿಗೆ ಆಸ್ಪತ್ರೆ ಚಿಕಿತ್ಸೆಗಾಗಿ

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು 4 ಲಕ್ಷ ರೂ ಪರಿಹಾರ ಮಂಜೂರು ಮಾಡಿದ್ದಾರೆ.

ಹನುಮಂತಪ್ಪ ಹಳ್ಳಿಕೇರಿ ಅವರು ಮೂತ್ರಪಿಂಡ ವೈಫಲ್ಯದಿಂದ ಬಳಲುತ್ತಿದ್ದು, ಅದರ ಚಿಕಿತ್ಸೆಗಾಗಿ ಹೆಚ್ಚಿನ ಹಣಕಾಸು ನೆರವು ಅಗತ್ಯವಿತ್ತು.

ಈ ಬಗ್ಗೆ ಕೊಪ್ಪಳ ಶಾಸಕ ರಾಘವೇಂದ್ರ ಹಿಟ್ನಾಳ್ ಮತ್ತು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ (ಕೆಯುಡಬ್ಲ್ಯೂಜೆ)

ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು ಅವರು ಮುಖ್ಯಮಂತ್ರಿ ಗಮನಕ್ಕೆ ತಂದಿದ್ದು ನೆರವು ಕೋರಿದ್ದರು.

ಶಾಸಕರು & ಕೆಯುಡಬ್ಲ್ಯೂಜೆ ಮನವಿ ಮೇರೆಗೆ ಪರಿಹಾರ ಮಂಜೂರು ಮಾಡಿದ ಸಿಎಂ ಸಿದ್ದರಾಮಯ್ಯಅವರಿಗೆ, ಈ ನಿಟ್ಟಿನಲ್ಲಿ ಸಹಕಾರ ನೀಡಿದ

ಸಿಎಂ ಮಾಧ್ಯಮ ಸಲಹೆಗಾರರಾದ ಕೆ.ವಿ.ಪ್ರಭಾಕರ್ ಅವರಿಗೆ

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ (ಕೆಯುಡಬ್ಲ್ಯೂಜೆ) ಧನ್ಯವಾದ ಸಲ್ಲಿಸಿದೆ.

# ಮಹಾತ್ಮ ಗಾಂಧಿ ನರೇಗಾ ಯೋಜನೆ ಪರಿಣಾಮಕಾರಿ ಅನುಷ್ಠಾನಕ್ಕೆ ತನ್ನಿ

■ ಉದಯರಶ್ಮಿ ದಿನಪತ್ರಿಕೆ



**ವಿಜಯಪುರದಲ್ಲಿ ನಡೆದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಜಿಪಂ ಉಪ ಕಾರ್ಯದರ್ಶಿ ಪ್ರಕಾಶ ವಡ್ಡರ ಅಧಿಕಾರಿಗಳಿಗೆ ಸೂಚನೆ**

ವಿಜಯಪುರ: ಗ್ರಾಮೀಣ ಬಡಜನರಿಗೆ ಉದ್ಯೋಗ ಭದ್ರತೆ ಒದಗಿಸುವ ಮಹಾತ್ಮಾ ಗಾಂಧಿ ನರೇಗಾ ಮಹತ್ವದ ಯೋಜನೆಯನ್ನು ಪರಿಣಾಮಕಾರಿಯಾಗಿ ಜಾ–ರಿಗೆ ತರಬೇಕು ಎಂದು ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ಪ್ರಕಾಶ ವಡ್ಡರ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾ ಪಂಚಾಯತಿಯ ಸಭಾಂಗಣದಲ್ಲಿ ಜಿಲ್ಲೆಯ ಎಲ್ಲ ತಾಲೂಕುಗಳ ಕಾರ್ಯನಿರ್ವಾಹಕ ಅಧಿಕಾರಿಗಳು, ಸಹಾಯಕ ನಿರ್ದೇಶಕರು (ಗ್ರಾ.ಉ) ತಾಂತ್ರಿಕ ಸಂಯೋಜಕರು, ತಾಲೂಕು ಎಮ್.ಐ.ಎಸ್ ಸಂಯೋಜಕರು, ಐ.ಇ.ಸಿ ಸಂಯೋಜ–ಕರು, ಆಡಳಿತ ಸಹಾಯಕರು ಹಾಗೂ ತಾಂತ್ರಿಕ ಸಹಾಯಕರೊಂದಿಗೆ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ವಿವಿಧ ವಿಷಯಗಳ ಕುರಿತು ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕೆಲಸದ ಬೇಡಿಕೆ ಸಲ್ಲಿಸಿದ ಪ್ರತಿಯೊಬ್ಬ ಅರ್ಹ ಕುಟುಂಬಗಳಿಗೆ ಕಾಲಮಿತಿಯೊಳಗೆ ಉದ್ಯೋಗ ಒದಗಿಸಬೇಕು ಹಾಗೂ ಕಾಮಗಾರಿಗಳನ್ನು ನಿಗದಿತ ಸಮಯದೊಳಗಾಗಿ ಪೂರ್ಣಗೊಳಿಸುವತ್ತ ವಿಶೇಷ ಗಮನ ಹರಿಸಬೇಕು ಎಂದು ಸೂಚಿಸಿದರು. ಉದ್ಯೋಗ ಮಾಡಿದ ಕೂಲಿಕಾರರ ವೇತನ ಪಾವತಿಯಲ್ಲಿ ಯಾವುದೇ ವಿಳಂಬವಾಗದಂತೆ ಕ್ರಮ

ಕೈಗೊಳ್ಳಬೇಕು, ಪ್ರತಿ ಹಂತದಲ್ಲೂ ಪಾರದರ್ಶಕತೆ ಕಾಪಾಡಬೇಕು. ಎಂಐಎಸ್ ನಲ್ಲಿ ಸಮಯಕ್ಕೆ ಸರಿಯಾಗಿ ಮಾಹಿತಿ ದಾಖಲಿಸಬೇಕು ಎಂದು ಸೂಚಿಸಿದರು.

ಜಿಲ್ಲೆಯ ಪ್ರತಿ 211 ಗ್ರಾಮ ಪಂಚಾಯಿತಿ ವ್ಯಾಪ್ತಿಗಳಲ್ಲಿ ಸಮುದಾಯ ಕಾಮಗಾರಿಗಳನ್ನು ಆರಂಭಿಸಿ ಕೂಲಿಕಾರರ ಫೇಸ್ ಅಥೆಂಟಿಕೇಷನ್ ಅನ್ನುಎರಡುದಿನಗಳಲ್ಲಿಕಡ್ಡಾಯವಾಗಿಶೇ.100ರಷ್ಟು ಆರಂಭಿಸಬೇಕು. ಉದ್ಯೋಗ ಒದಗಿಸಿರುವ ಎಲ್ಲಾ ಕೂಲಿಕಾರರಿಗೆ ನಿಗದಿತ ಸಮಯದಲ್ಲಿ ಕೂಲಿ ಪಾವತಿಸಲು ಕ್ರಮ ಕೈಗೊಳ್ಳಬೇಕು. ಇಲ್ಲಿಯವರೆಗಿನ ಪ್ರಗತಿ ಹಂತದಲ್ಲಿರುವ ಎಲ್ಲ ಕಾಮಗಾರಿಗಳನ್ನು ಕೂಡಲೇ ಶೇ. 100 ರಷ್ಟು ಪೂರ್ಣಗೊಳಿಸಬೇಕು ಎಂದರು.

ಮಹಾತ್ಮ ಗಾಂಧಿ ನರೇಗಾ ಯೋಜನೆ ಹಾಗೂ ಅನುಷ್ಠಾನ ಇಲಾಖೆಗಳಡಿ ಪ್ರಗತಿ ಹಂತದ ಎಲ್ಲಾ ಕಾಮಗಾರಿಗಳನ್ನು ಆದ್ಯತೆಯ ಮೇರೆಗೆ ಪೂರ್ಣಗೊಳಿಸಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯಿತಿಯ ಎಲ್ಲಾ ನರೇಗಾ ಸಿಬ್ಬಂದಿ ಉಪಸ್ಥಿತರಿದ್ದರು.

# ವನಜಾಕ್ಷಿ ಗುಗ್ಗರಿ ಅವರಿಗೆ ಪಿಎಚ್ಡಿ ಪದವಿ

■ ಉದಯರಶ್ಮಿ ದಿನಪತ್ರಿಕೆ



ಆಲಮೇಲ: ವಿಜಯಪುರ ಮಹಿಳಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಅತಿಥಿ ಅಧ್ಯಾಪಕಿಯಾಗಿ ಕಾರ್ಯ ನಿರ್ವಹಿಸುತ್ತಿರುವ ಆಲಮೇಲ ತಾಲ್ಲೂಕಿನ ದೇವರನಾವದಗಿ ಗ್ರಾಮದ ವನಜಾಕ್ಷಿ ಮಹೇಂದ್ರ ಗುಗ್ಗರಿ ಅವರು ಮಂಡಿಸಿದ ಕೆ.ಪಿ.ಪೂರ್ಣಚಂದ್ರ ತೇಜಸ್ವಿ ಮತ್ತು ಪಿ.ಲಂಕೇಶ ಅವರ ಕಥನ ಸಾಹಿತ್ಯದಲ್ಲಿ ಮಹಿಳೆ : ವಿಭಿನ್ನ ಆಯಾಮಗಳು" ಎಂಬ ವಿಷಯದ ಮೇಲಿನ ಅವರ ಪಿ.ಎಚ್.ಡಿ. ಮಹಾಪ್ರಬಂಧಕ್ಕೆ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯವು ಡಾಕ್ಟರೇಟ ಪದವಿ ನೀಡಿ ಗೌರವಿಸಿದೆ. ಇವ–ರಿಗೆ ಮಹಿಳಾ ವಿವಿಯ ಕನ್ನಡ ಅಧ್ಯಯನ ವಿಭಾಗದ ಪ್ರಾಧ್ಯಾಪಕರಾದ ಪ್ರೊ. ನಾರಾಯಣ ಬಿ. ಪವಾರ ಅವರು ಮಾರ್ಗದರ್ಶಕರಾಗಿದ್ದರು. ಇವರ ಈ ಸಾಧನೆಗೆ ದೇವರನಾವದಗಿಯ ಶ್ರೀ ಮಲ್ಲಿಕಾರ್ಜುನ ಶಿಕ್ಷಣ ಸಂಸ್ಥೆಯ ಆಡಳಿತ ಮಂಡಳಿಯ ಸದಸ್ಯರು, ಶಿಕ್ಷಕ–ಶಿಕ್ಷಕೇತರ ಸಿಬ್ಬಂದಿ, ಶ್ರೀ ವಾಸುದೇವ ಬಲವಂತ ಫಡಕೆ ವಿವಿಧೋದ್ದೇಶ ಸಂಘ ಹಾಗೂ ಶ್ರೀ ಅಮೋಘಸಿದ್ಧ ಭಕ್ತ ಮಂಡಳಿಯವರು ಅಪಾರ ಹರ್ಷ ವ್ಯಕ್ತಪಡಿಸಿ ಅಭಿನಂದನೆ ಸಲ್ಲಿಸಿದ್ದಾರೆ.

# ಮೋಬೈಲ್ನಿಂದ ನಶಿಸಿ ಹೋಗುತ್ತಿರುವ ರಕ್ತ ಸಂಬಂಧಗಳು



■ ಉದಯರಶ್ಮಿ ದಿನಪತ್ರಿಕೆ

**ವಿಜಯಪುರದ ಬಿ.ಎಲ್.ಡಿ.ಇ ಸ್ವಾಯತ್ತ ವಿಶ್ವವಿದ್ಯಾನಿಲಯದ ಉಪಕುಲಪತಿ ಡಾ.ವಾಯ್. ಎಂ.ಜಯರಾಜ ಅಭಿಮತ**

ಸಿಂದಗಿ: ಇಂದಿನ ಮಕ್ಕಳ ಸ್ಥಿತಿ ಏನಾಗಿದೆ ಎಂದರೆ ಮನೆಗೆ ಬಂದ ಅತಿಥಿಗಳಿಗಿಂತ, ಪಾಲಕ–ರಿಗಿಂತ ಮೋಬೈಲ್ ಮೇಲೆಯೇ ಹೆಚ್ಚು ಪ್ರೀತಿ. ಇದರಿಂದ ರಕ್ತ ಸಂಬಂಧಗಳು ನಶಿಸಿ ಹೋಗುತ್ತಿವೆ ಎಂದು ವಿಜಯಪುರದ ಬಿ.ಎಲ್.ಡಿ.ಇ ಸ್ವಾಯತ್ತ ವಿಶ್ವವಿದ್ಯಾನಿಲಯದ ಉಪಕುಲಪತಿ ಡಾ.ವಾಯ್.ಎಂ. ಜಯರಾಜ ವಿಷಾದ ವ್ಯಕ್ತಪಡಿಸಿದರು.

ಸಿಂದಗಿ ನಗರದ ಶ್ರೀ ಪದ್ಮರಾಜ ವಿದ್ಯಾವರ್ಧಕ ಸಂಸ್ಥೆ, ಸಾರಂಗಮಠದ ಜಿ.ಪಿ.ಪೋರವಾಲ ಕಲಾ ವಾಣಿಜ್ಯ ಮತ್ತು ವ್ಹಿ.ವ್ಹಿ.ಸಾಲಿಮಠ ವಿಜ್ಞಾನ ಮಹಾವಿದ್ಯಾಲಯದಲ್ಲಿ ಹಮ್ಮಿಕೊಂಡ ವಾರ್ಷಿಕ ಸ್ನೇಹ ಸಮ್ಮೇಳನದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಯಾವುದೇ ಕ್ಷೇತ್ರವಿರಲಿ ಅಲ್ಲಿ ಶ್ರದ್ದೆ ಮತ್ತು ಗಣನೀಯವಾಗಿ ಸೇವೆ ಮಾಡಿ ಸಾಧನೆ ಮಾಡಬೇಕು. ಇಂದು ಹೃದಯವಂತಿಕೆ ಮಾತುಗಳಿಗಿಂತ ಒಣ ಮಾತುಗಳೇ ಹೆಚ್ಚಾಗುತ್ತಿವೆ. ಇದರ ಬಗ್ಗೆ ವಿದ್ಯಾರ್ಥಿಗಳು ತಲೆಕೆಡಿಸಿಕೊಳ್ಳದೆ ಮುನ್ನುಗ್ಗಬೇಕು ಎಂದರು.

ಈ ವೇಳೆ ಸ್ಥಳೀಯ ಸಾರಂಗಮಠದ ಪೀಠಾಧಿಪತಿ, ಸಂಸ್ಥೆಯ ಅಧ್ಯಕ್ಷರಾದ ಪೂಜ್ಯಶ್ರೀ ಡಾ.ಪ್ರಭುಸಾರಂಗದೇವ ಶಿವಾಚಾರ್ಯರು ಸಾನಿಧ್ಯ ವಹಿಸಿ ಮಾತನಾಡಿ, ಇಂದಿನ ಯುವ ಜನಾಂಗ ಎಷ್ಟೇ ಓದಿದರು ದೊಡ್ಡ ಸ್ಥಾನಕ್ಕೆ ಏರಿದರು ವಿದ್ಯೆಯ ಜೊತೆಗೆ ವಿನಮ್ರತೆ ಇರಬೇಕು. ಸೌಜನ್ಯವೇ ಮಾನವನಿಗೆ ಭೂಷಣ ಅದನ್ನು ಅಳವಡಿಸಿಕೊಳ್ಳಬೇಕು ಎಂದರು.

ಇದೇ ಸಂಧರ್ಭದಲ್ಲಿ ಸಮ್ಮುಖ ವಹಿಸಿದ ಸಾರಂಗಮಠದ ಉತ್ತರಾಧಿಕಾರಿ ಡಾ.ವಿಶ್ವಪ್ರಭುದೇವ ಶಿವಾಚಾರ್ಯರು ಮಾತನಾಡಿದರು. ಮಹಾವಿದ್ಯಾಲಯದ ಪ್ರಾಚಾರ್ಯ ಡಿ. ಎಮ್.ಸರಶೆಟ್ಟಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಪ್ರಾಧ್ಯಾಪಕ ಬಿ.ಆರ್.ಮಹಾಜನಶೆಟ್ಟಿ, ಪ್ರತಿ–ಕಾ ತಳವಾರ, ವಿದ್ಯಾರ್ಥಿ ಪ್ರತಿನಿಧಿ ಬೀರಲಿಂಗ ಗುಂಡಮನಿ ವೇದಿಕೆ ಮೇಲಿದ್ದರು. ಕಾರ್ಯಕ್ರಮದಲ್ಲಿ ಸಂಸ್ಥೆಯ ಸಹ–ಕಾರ್ಯದರ್ಶಿ ಅಶೋಕ ವಾರದ, ಪ್ರಾಧ್ಯಾಪಕ ಮಹಾದೇವ ಸಂಕಪಾಲ, ಡಾ.ರವಿ ಲಮಾಣಿ, ಡಾ.ಪ್ರಕಾಶ ರಾಠೋಡ, ಎಮ್. ಆಯ್.ಮಿಂಚ, ಪಿ.ಆರ್.ಪಾಟೀಲ, ಪಿ.ಎ.ಪಾಂಡೆ, ಭೀಮಾಶಂಕರ ಅರಳಗುಂಡಗಿ, ಡಾ.ಎಸ್. ಆಯ್.ಭಂಡಾರಿ, ಡಾ.ಸುಮಾ ನಿರಣಿ, ಎಸ್. ಎಸ್.ಮಂಗಳೂರ ಇದ್ದರು. ಡಾ.ರವಿ ಗೋಲಾ ನಿರೂಪಿಸಿದರು. ಡಾ.ನಾಗರಾಜ ಮುರಗೋಡ ಸ್ವಾಗತಿಸಿದರು. ಮಹೇಶ ರೂಡಗಿ ವಂದಿಸಿದರು.

# ಕನ್ನಡವೆಂದರೆ ನಮ್ಮ ಸಂಸ್ಕೃತಿಯ ಹಿರಿಮೆ :ಹೈಯ್ಯಾಳಕರ

## ಸಿಂದಗಿಯಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ 112ನೆಯ ಸಂಸ್ಥಾಪನಾ ದಿನಾಚರಣೆ

■ ಉದಯರಶ್ಮಿ ದಿನಪತ್ರಿಕೆ



ಸಿಂದಗಿ: ಕನ್ನಡವೆಂದರೆ ಕೇವಲ ಅದೊಂದು ಭಾಷೆಯಲ್ಲ. ಅದೊಂದು ಸಂಸ್ಕೃತಿಯ ಹಿರಿಮೆ. ಕನ್ನಡ ಭಾಷೆಗೆ ಸಾವಿರಾರು ವರ್ಷಗಳ ಇತಿಹಾಸವಿದೆ ಎಂದು ನಿವೃತ್ತ ಪ್ರಾಚಾರ್ಯ ಹಾಗೂ ಕನ್ನಡ ಸಾಹಿತ್ಯ ಪರಿಷತ್ತಿನ ಮಾಜಿ ಅಧ್ಯಕ್ಷ ಎಂ.ಎಸ್.ಹೈಯ್ಯಾಳಕರ ಹೇಳಿದರು.

ಸಿಂದಗಿ ನಗರದ ತಾಲೂಕು ಪಂಚಾಯತ್ ಸಭಾಂಗಣದಲ್ಲಿ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತು ಹಮ್ಮಿಕೊಂಡ ಕನ್ನಡ ಸಾಹಿತ್ಯ ಪರಿಷತ್ತಿನ 112ನೆಯ ಸಂಸ್ಥಾಪನಾ ದಿನಾಚರಣೆಯ ಅಧ್ಯಕ್ಷತೆಯನ್ನು ವಹಿಸಿ ಮಾತನಾಡಿದ ಅವರು, ಮುಚ್ಚುತ್ತಿರುವ ಕನ್ನಡ ಶಾಲೆಗಳನ್ನು ಉಳಿಸುವ ನಿಟ್ಟಿನಲ್ಲಿ ಕನ್ನಡ ಸಾಹಿತ್ಯ ಪರಿಷತ್ತು ಹಾಗೂ ಕನ್ನಡಪರ ಸಂಘಟನೆಗಳು ಕಾರ್ಯಪ್ರವೃತ್ತರಾಗಬೇಕು. ಕನ್ನಡ ಭಾಷೆಯ ಅಸ್ಮಿತೆಗಾಗಿ ನಾವೆಲ್ಲರೂ ಹೋರಾಡಬೇಕು. ಭಾಷಾವಾರು ಹಾಗೂ ವಿಭಾಗವಾರು ತುಲನೆ ಮಾಡಿದಾಗ ಉತ್ತರ ಕರ್ನಾಟಕಕ್ಕೆ ಸದಾ ಅನ್ಯಾಯವಾಗುತ್ತಲೇ ಬಂದಿದೆ. ಇಂತಹ ಅನ್ಯಾಯವನ್ನು ಸರಿದೂಗಿಸುವ ನಿಟ್ಟಿನಲ್ಲಿ ನಮ್ಮ ಜನಪ್ರತಿನಿಧಿಗಳು ಮುತುವರ್ಜಿ ವಹಿಸಬೇಕು. ಎಲ್ಲ ಸರಕಾರಿ ಕಚೇರಿಗಳಲ್ಲಿ ಕಡ್ಡಾಯವಾಗಿ ಕನ್ನಡ ಭಾಷೆಯಲ್ಲಿ ಪತ್ರ ವ್ಯವಹಾರ ಕಡ್ಡಾಯಗೊಳಿಸಬೇಕು ಎಂದರು.

ಈ ವೇಳೆ ಉಪನ್ಯಾಸ ನೀಡಿದ ಎಚ್.ಜಿ. ಪಪೂ ಕಾಲೇಜಿನ ಪ್ರಾಚಾರ್ಯ ಎ.ಆರ್.ಹೆಗ್ಗನದೊಡ್ಡಿ ಮಾತನಾಡಿ, 112 ಸಂವತ್ಸರಗಳನ್ನು ಪೂರೈಸಿರುವ ಕನ್ನಡ ಸಾಹಿತ್ಯ ಪರಿಷತ್ತು ಕೇವಲ 4 ಸದಸ್ಯರೊಂದಿಗೆ ಪ್ರಾರಂಭವಾಗಿ ಇಂದು ಹೆಮ್ಮರವಾಗಿ ರಾಜ್ಯಾದ್ಯಂತ ತನ್ನದೇ ಆದ ಗಟ್ಟಿ ಛಾಪು ಮೂಡಿಸಿ ನಾಡು–ನುಡಿ, ನೆಲ–ಜಲ ರಕ್ಷಣೆಗೆ ಕಟಿಬದ್ಧವಾಗಿದೆ ಎಂದರು.

ಇದೇ ಸಂದರ್ಭದಲ್ಲಿ ಕಸಾಪ ತಾಲೂಕಾಧ್ಯಕ್ಷ ವೈ.ಸಿ.ಮಯೂರ ಪ್ರಾಸ್ತಾವಿಕ ಮಾತನಾಡಿದರು.

ತಾಲೂಕು ಗೌರವ ಕಾರ್ಯದರ್ಶಿ ಆನಂದ ಶಾಬಾದಿ ಸ್ವಾಗತಿಸಿ ನಿರೂಪಿಸಿದರು. ರವಿ ಹೋಳಿ ವಂದಿಸಿದರು. ಕಾರ್ಯಕ್ರಮದ ವೇದಿಕೆ ಮೇಲೆ ಸಿದ್ದಣ್ಣ ಕೂಚಬಾಳ, ಬಿಸಿಯೂಟದ ಅಧಿಕಾರಿ ಅರವಿಂದ ಡೋಣೂರ, ಶಾಂತಲಾ ಮೋಸಲಗಿ ಇದ್ದರು. ಕಾರ್ಯಕ್ರಮದಲ್ಲಿ ರಾಜಶೇಖರ್ ನರಗೋದಿ, ಶಾಂತು ರಾಣಾಗೋಳ, ಜೈಭೀಮ್ ತಳಕೇರಿ, ವಿಠ್ಠಲ್ ಬಾಗೇವಾಡಿ ಸೇರಿದಂತೆ ಕನ್ನಡಾಭಿಮಾನಿಗಳು ಇದ್ದರು.

# 2028ಕ್ಕೆ ರಾಜ್ಯದಲ್ಲಿ ಎನ್.ಡಿ.ಎ ಕೈಗೆ ಅಧಿಕಾರದ ಚುಕ್ಕಾಣಿ

## ಹೆಚ್ ಡಿ ಕೋಟೆಯಲ್ಲಿ ಜೆಡಿಎಸ್ ಮುಖಂಡ ಕೆ.ಎಂ.ಕೃಷ್ಣನಾಯಕ ಭವಿಷ್ಯ

■ ಉದಯರಶ್ಮಿ ದಿನಪತ್ರಿಕೆ



ಹೆಚ್ ಡಿ ಕೋಟೆ: 2028 ಕ್ಕೆ ಎನ್ ಡಿಎ ಸರ್ಕಾರ ಬರಲಿದ್ದು, ಹೆಚ್ ಡಿ ಕೋಟೆ ವಿಧಾನಸಭಾ ಕ್ಷೇತ್ರದ ಜನ–ರಿಗೆ, ರೈತರಿಗೆ, ಕೂಲಿಕಾರ್ಮಿಕರಿಗೆ, ಪಕ್ಷದ ಕಾರ್ಯಕರ್ತ–ರಿಗೆ ಒಳ್ಳೆಯದಾಗುತ್ತೆ ಎಂದು ಜೆಡಿಎಸ್ ಮುಖಂಡ ಕೆ.ಎಂ. ಕೃಷ್ಣನಾಯಕ ಭವಿಷ್ಯ ನುಡಿದರು.

ಪಟ್ಟಣದ ಬಿಜಿಎಸ್ ಕಲ್ಯಾಣ ಮಂಟಪದಲ್ಲಿ 53 ನೇ ಹುಟ್ಟುಹಬ್ಬದ ನಿಮಿತ್ತ ಎಸ್ ಎಸ್ ಎಲ್ ಸಿ, ಮತ್ತು ಪಿಯುಸಿಯಲ್ಲಿ ಅತೀ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗು ಸಹಾಯಧನ ವಿತರಿಸಿ ಮಾತನಾಡಿದರು. ಕಳೆದ 10 ವರ್ಷಗಳಿಂದ ನಾನು ಹುಟ್ಟುಹಬ್ಬ ಆಚರಿಸಿಕೊಳ್ಳುತ್ತಿಲ್ಲ. ಆದರೆ ಈ ಬಾರಿ ಕಾರ್ಯಕರ್ತರು, ಅಭಿಮಾನಿಗಳ ಒತ್ತಾಯದ ಮೇರೆಗೆ ಹುಟ್ಟುಹಬ್ಬ ಸಂಭ್ರಮದಲ್ಲಿ ಪಾಲ್ಗೊಂಡಿದ್ದೇನೆ. ಇಷ್ಟು ವರ್ಷಗಳಿಂದ ಹೆಚ್ ಡಿ ಕೋಟೆ ಕೋಟೆ ಕ್ಷೇತ್ರದಲ್ಲಿ ಏನು ಸಂಪಾದನೆ ಮಾಡಿದ್ದೇನೋ ಇಲ್ವೋ ಗೊತ್ತಿಲ್ಲ. ಆದರೆ ಜನರ ಪ್ರೀತಿ ಸಂಪಾದನೆ ಮಾಡಿದ್ದೇನೆ. ಜನರ ವಿಶ್ವಾಸ ಗಳಿಸಿದ್ದೇನೆ. ಇದಕ್ಕಿಂತ ಮತ್ತೇನು ಬೇಕು? ಎಂದರು.

ಈ ಬಾರಿ ಎಸ್ ಎಸ್ ಎಲ್ ಸಿ ಪರೀಕ್ಷೆ ಫಲಿತಾಂಶದಲ್ಲಿ ಮೈಸೂರು ಜಿಲ್ಲೆಗೆ ಹೆಚ್ ಡಿ ಕೋಟೆ ತಾಲೂಕು ಪ್ರಥಮ ಸ್ಥಾನ ಬಂದಿದೆ. ಇದರ ಕ್ರೆಡಿಟ್ ಅನ್ನು ಮಕ್ಕಳಿಗೆ, ಅವರ ಪೋಷಕರಿಗೆ, ಶಿಕ್ಷಕರಿಗೆ ಜೊತೆಗೆ ಕ್ಷೇತ್ರ ಶಿಕ್ಷಣಾಧಿಕಾರಿ ರಾಜು ಅವರಿಗೆ ಕೊಡುತ್ತೇನೆ ಎಂದರು.

ಗೇಯುವ ಎತ್ತಿಗೆ ಮೇವು ಹಾಕಿ ಎಂಬ ಶಾಸಕ ಅನಿಲ್ ಚಿಕ್ಕಮಾದು ಹೇಳಿಕೆಗೆ ಪ್ರತಿಕ್ರಿಯಿಸಿದ ಕೆ. ಎಂ. ಕೃಷ್ಣನಾಯಕ, ಗೇಯುವ ಎತ್ತು ಚೆನ್ನಾಗಿ ಕೆಲಸ ಮಾಡುತ್ತಿದೆಯೂ, ಇಲ್ಲವೋ ಎಂಬುದನ್ನು ಈ ಕ್ಷೇತ್ರದ ಜನತೆ ದಿನಾಲೂ ನೋಡುತ್ತಿದ್ದಾರೆ, ಸಾಮಾಜಿ–ಕ ಜಾಲತಾಣಗಳಲ್ಲೂ ವೀಕ್ಷಣೆ ಮಾಡುತ್ತಿದ್ದಾರೆ. ಅವರ ಅಭಿಪ್ರಾಯ ಅನಿಸಿಕೆ ವ್ಯಕ್ತಪಡಿಸುತ್ತಿದ್ದಾರೆ. ಇದರ ಬಗ್ಗೆ ಜಾಸ್ತಿ ಹೇಳಲ್ಲ. ಕ್ಷೇತ್ರದ ಜನತೆಯೇ ತೀರ್ಮಾನ ಮಾಡ್ತಾರೆ. ಸರ್ಕಾರದಿಂದ ಶಾಸಕರು 1600 ಕೋಟಿ ರೂಪಾಯಿ ಅನುದಾನ ತಂದಿದ್ದೀನಿ ಎಂದು ಹೇಳುತ್ತಿದ್ದಾರೆ. ಇದು ಬರೀ ಸುಳ್ಳು. ಕೆಆರ್ ಎಸ್ ಮಾದರಿಯಲ್ಲಿ ಕಬಿನಿ ಉದ್ಯಾನವನ ಮತ್ತು ಗಾರ್ಮೆಂಟ್ ನಿರ್ಮಾಣದ ಭರವಸೆ ಭರವಸೆಯಾಗಿಯೇ ಉಳಿದಿದೆ..

ನಾನು ಸುಖಾಸುಮ್ಮನೆ ಶಾಸಕರ ವಿರುದ್ಧ ಆರೋಪ ಮಾಡಿಲ್ಲ, ಜನರು, ಕಾರ್ಯಕರ್ತರು ನನ್ನ ಮುಂದೆ ಹೇಳುವ ವಿಚಾರಗಳನ್ನು ಪ್ರಸ್ತಾಪ ಮಾಡಿದ್ದೇನೆ. ಒಂದೇದಿನ 8 ಜನಸಂಪರ್ಕ ಸಭೆ ಮಾಡಿದ್ದೇನೆ ಎಂದು ಶಾಸಕರು ಹೇಳಿದ್ದಾರೆ. ಒಂದೇ ದಿನ 8 ಜನಸಂಪರ್ಕ ಸಭೆ ಮಾಡಲು ಸಾಧ್ಯನಾ? ಎಂದು ಪ್ರಶ್ನಿಸಿದರು.

# ಮೇ.24 ರಂದು ಪಂಚಮಸಾಲಿ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಎಸ್ಎಸ್ಎಲ್ಸಿ ಹಾಗೂ ಪಿಯುಸಿಯಲ್ಲಿ ಸಾಧನೆ ತೋರಿದ 5 ಸಾವಿರ ವಿದ್ಯಾರ್ಥಿಗಳನ್ನು ಸನ್ಮಾನಿಸುವ ಅಭೂತಪೂರ್ವ ಪ್ರತಿಭಾ ಪುರಸ್ಕಾರ ಹಾಗೂ ಸನ್ಮಾನ ಕಾರ್ಯಕ್ರಮ ವಿಜಯಪುರದ ಕಿತ್ತೂರ ರಾಣಿ ಚೆನ್ನಮ್ಮ ಮಂಗಲ ಕಾರ್ಯಾಲಯದಲ್ಲಿ ಇದೇ ದಿನಾಂಕ 24 ರಂದು ನಡೆಯಲಿದೆ. ಇದೇ ಪ್ರಥ–ಮ ಬಾರಿಗೆ ಅಪೂರ್ವ ರೀತಿಯಲ್ಲಿ ಈ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಪಂಚಮಸಾಲಿ ಸಮಾಜದ ಮುಖಂಡ ಡಾ.ಸುರೇಶ ಬಿರಾದಾರ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪಂಚಮಸಾಲಿ ಸಮಾಜದ ಪ್ರತಿಭಾನ್ವಿತ ವಿದ್ಯಾರ್ಥಿಗಳನ್ನು ಸನ್ಮಾನಿಸಿ ಪ್ರೋತಾಹಿಸುವ ದೃಷ್ಟಿಯಿಂದ ಈ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ, ಜಿಲ್ಲಾಮಟ್ಟದಲ್ಲಿ ಈ ರೀತಿ ಸಮಾಜದ ವಿದ್ಯಾರ್ಥಿಗಳಿಗೆ ಸಾವಿರಾರು ಸಂಖ್ಯೆಯಲ್ಲೊ ಒಂದೇ ವೇದಿಕೆಯಲ್ಲಿ ಸನ್ಮಾನಿಸುವ ಕಾರ್ಯಕ್ರಮ ಇದಾಗಲಿದೆ ಎಂದರು.

ಪಂಚಮಸಾಲಿ ಸಮಾಜ ಕೃಷಿ ಆದಾರಿತ ಸಮಾಜ, ನಮ್ಮ ಸಮಾಜದಲ್ಲಿ ಬಹಳಷ್ಟು ಬಡವರೇ ಇದ್ದಾರೆ. ಪ್ರತಿಭಾವಂತ ವಿದ್ಯಾರ್ಥಿಗಳು ಹೆಚ್ಚಿನ ಸಾಧನೆ ತೋರಲು ಅನುಕೂಲವಾಗಲು ಹಾಗೂ ಉಳಿದ ವಿದ್ಯಾರ್ಥಿಗಳಿಗೂ ಸ್ಫೂರ್ತಿ ತುಂಬುವ ನಿಟ್ಟಿನಲ್ಲಿ ಕಿತ್ತೂರು ರಾಣಿ ಚೆನ್ನಮ್ಮ ವಿಜಯೋತ್ಸವ ಸಮಿತಿಯಿಂದ ಈ ಕಾರ್ಯಕ್ರಮ ಆಯೋಜಿಸಲಾಗಿದೆ, ಬಡ ವಿದ್ಯಾರ್ಥಿಗಳಿಗೆ ಸ್ಕಾಲರ್‌ಶಿಪ್ ನೀಡುವ ಮೂಲಕ ಸಮಾಜದ ವಿದ್ಯಾರ್ಥಿಗಳು ಇನ್ನಷ್ಟೂ ಸಾಧನೆ ತೋರಲು ಸಹಾಯಕವಾಗಲಿದೆ, ಈ ತೆರನಾಗಿ ಅನೇಕ ಸಮಾಜ ಮುಖಿ ಕಾರ್ಯಚಟುವಟಿಕೆಗಳನ್ನು ಸಮಿತಿ ವತಿಯಿಂದ ಸಂಘಟಿಸಲಾಗುವುದು ಎಂದರು.

ಪಂಚಮಸಾಲಿ ಸಮಾಜದ ಮುಖಂಡರಾದ ಹಣಮಂತ ಸಾರವಾಡ, ಬಿ.ಎಲ್.ಬಿರಾದಾರ, ಅಶೋಕ ಬಿರಾದಾರ, ಬಸವರಾಜ ಕಳಸಗೊಂಡ, ಮುತ್ತು ಜಂಗಮಶೆಟ್ಟಿ ಮೊದಲಾದವರು ಪಾಲ್ಗೊಂಡಿದ್ದರು.

# ಕೆಬಿಜೆಎನ್ಎಲ್ ಅಧಿಕಾರಿ ಹಾದಿಮನಿ ಮೇಲೆ ಕ್ರಮಕ್ಕೆ ಆಗ್ರಹಿಸಿ ಮನವಿ

■ ಉದಯರಶ್ಮಿ ದಿನಪತ್ರಿಕೆ



ಸಿಂದಗಿ: ರಾಂಪೂರ ಕೆಬಿಜೆಎನ್–ಎಲ್ ಐಬಿಸಿ ಓ ಮತ್ತು ಎಂ ವಿಭಾಗ ಕಾರ್ಯಾಲಯದಲ್ಲಿ ದ್ವಿತೀಯ ದರ್ಜೆ ಸಹಾಯಕರಾಗಿ ಸೇವೆ ಸಲ್ಲಿಸುತ್ತಿರುವ ರಾಘವೇಂದ್ರ ಹಾದಿಮನಿ ಅವರ ವಿರುದ್ಧ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ರಾಜ್ಯ ಕಾರ್ಯದರ್ಶಿ ಪಿರೂ ಕೆರೂರ ಅವರು ಮುಖ್ಯ ಇಂಜನೀಯರ್ ಅವರಿಗೆ ಮನವಿ ಸಲ್ಲಿಸಿದರು.

ಇಲಾಖೆಯ ದ್ವಿತೀಯ ದರ್ಜೆ ಸಹಾಯಕರಾಗಿ ಕಾರ್ಯನಿರ್ವಹಿಸುತ್ತಿರುವ ರಾಘವೇಂದ್ರ ಆರ್. ಹಾದಿಮನಿ ಅವರು ಕಛೇರಿಗೆ ಬಂದ ರೈತರೊಡನೆ ಅನುಚಿತವಾಗಿ ವರ್ತನೆ ಮಾಡುತ್ತಾರೆ. ಜೊತೆಗೆ ಕರ್ತವ್ಯದ ಸಮಯದಲ್ಲಿ ಕಛೇರಿ ಬಿಟ್ಟು ಹೆಚ್ಚಿಗೆ ಹೊರಗೆ ಇರುತ್ತಾರೆ. ಸರ್ಕಾರದ ಸುತ್ತೋಲೆ ಪ್ರಕಾರ 5 ವರ್ಷಗಳಿಗಿಂತ ಹೆಚ್ಚಿಗೆ ಒಂದೇ ಕಛೇ–ರಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳನ್ನು ವರ್ಗಾವಣೆ ಮಾಡುವ ಆದೇಶವಿದೆ. ಈ ರೀತಿ ಸರ್ಕಾರದ ಆದೇಶವಿದ್ದರೂ ಸಹ ಇವರು ಅನೇಕ ವರ್ಷಗಳಿಂದ ಇಲ್ಲಯೇ ಕಾರ್ಯನಿರ್ವಹಿಸುತ್ತಿದ್ದಾರೆ. ಇವರ ವರ್ಗಾವಣೆ ಇಲ್ಲಿಯವರೆಗೂ ಆಗಿರುವುದಿಲ್ಲ. ಇನ್ನೂ ಕರ್ತವ್ಯದ ಸಮಯದಲ್ಲಿ ಗುರುತಿನ ಚೀಟಿ ಧ–ರಿಸದೇ ಬೇಜವಾಬ್ದಾರಿತನದಿಂದ ಕಾರ್ಯನಿರ್ವಹಿಸುತ್ತಿದ್ದಾರೆ ಎಂದು ದೂರಿದರು.

ಜೊತೆಗೆ ತಮ್ಮ ಹಂತದಲ್ಲಿದ್ದ ಇದ್ದ ಕೆಲಸ ಸರಿಯಾಗಿ ನಿರ್ವಹಿಸುತ್ತಿಲ್ಲ. ಯಾರೇ ಒಂದು ಸಣ್ಣ ಪತ್ರ ವಿಲೇವಾರಿ ಮಾಡಲು ಹಣ ಬೇಡಿಕೆ ಇಡುತ್ತಾರೆ ಎಂದು ರೈತರು ಹಲವು ಬಾರಿ ದೂ–ರಿದ್ದಾರೆ. ಆದ ಕಾರಣ ಇವರನ್ನು ಆದಷ್ಟು ಬೇಗ ಕರ್ತವ್ಯದಿಂದ ವಜಾಗೊಳಿಸಿ ಇವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಮನವಿ ಮಾಡಿಕೊಂಡಿದ್ದಾರೆ.

ಈ ವೇಳೆ ತಾಲೂಕಾಧ್ಯಕ್ಷ ಸಿದ್ದು ಬೀರಗೊಂಡ, ಉಪಾಧ್ಯಕ್ಷ ಭೀಮು ಇಂಗಳಗಿ ಸುನೀಲ ಜಾಬಾನವರ, ಯೂನಿಸ್ ತಾಂಬೋಳ್ಳಿ, ಮಶಾಕಸಾಬ್ ವಾಲೀಕಾರ, ಮಲಕು ಹಿರೇಕುರುಬರ ಸೇರಿದಂತೆ ಇತರರು ಇದ್ದರು.

**Printed by:** AVINASH BIDARI, **Published and owned by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR